ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

28 ಜನವರಿ 2026 ಬುಧವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 314 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



19 ವರ್ಷದೊಳಗಿನ ವಿಶ್ವಕಪ್ ಟೂರ್ನಿಯಲ್ಲಿ ಜಿಂಬಾಬ್ವೆ ವಿರುದ್ಧ ನಡೆದ ಪಂದ್ಯದಲ್ಲಿ ಭಾರತದ ಮಲ್ಹೋತ್ರಾ ಭರ್ಜರಿ ಶತಕ ಸಾಧನೆ ಮಾಡಿದ್ದಾರೆ.



ರಸ್ತೆ ಅಭಿವೃದ್ಧಿ ದೇಶದ ಆರ್ಥಿಕತೆಯ ಬೆನ್ನೆಲುಬು » 2



ಭಾರತ ಮತ್ತು ಯುರೋಪಿಯನ್ ಒಕ್ಕೂಟ ನಡುವಿನ 16ನೇ ಶೃಂಗಸಭೆಯಲ್ಲಿ ನವದೆಹಲಿಯಲ್ಲಿ ಮದರ್ ಆಫ್ ಆಲ್ ಡೀಲ್ಸ್ ಎಂದೇ ಕರೆಯಲ್ಪಡುವ ಭಾರತ-ಯುರೋಪಿಯನ್ ಒಕ್ಕೂಟವು ಮುಕ್ತ ವ್ಯಾಪಾರ ಒಪ್ಪಂದಕ್ಕೆ ಮಂಗಳವಾರ ಅಧಿಕೃತವಾಗಿ ಸಹಿ ಹಾಕಿವೆ.



ಮುರುಳಿ ಮೋಹನ್ ಬೆಂಬಲಕ್ಕೆ ಒಕ್ಕಲಿಗ-ಲಿಂಗಾಯತರು » 4

# 6 ಸಾವಿರ ಗ್ರಾ.ಪಂ.ಗೆ ಗಾಂಧೀಜಿ ಹೆಸರು

## ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ | ಕೇಂದ್ರದ ವಿರುದ್ಧ ಪ್ರತಿಭಟನೆ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದ 6,000 ಗ್ರಾಮ ಪಂಚಾಯಿತಿಗಳಿಗೆ ಮಹಾತ್ಮ ಗಾಂಧಿ ಹೆಸರನ್ನು ಇಡಲಾಗುವುದು. ಮುಂದಿನ ಬಜೆಟ್‌ನಲ್ಲಿಯೇ ಅಧಿಕೃತ ಘೋಷಣೆ ಹೊರಡಿಸಲಾಗುವುದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು.

ವಿಬಿ ಜಿ ರಾಮ್ ಜಿ ಕಾಯ್ದೆ ವಿರೋಧಿಸಿ ಸ್ವಾತಂತ್ರ್ಯ ಉದ್ಯಾನದಲ್ಲಿ ಮಂಗಳವಾರ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಗಾಂಧೀಜಿ ಅವರನ್ನು ಆರ್‌ಎಸ್‌ಎಸ್‌ನ ಗೋಡ್ಸೆ ಕೊಂದರು. ಈಗ ಆರ್‌ಎಸ್‌ಎಸ್ ಪ್ರೋತ್ಸಾಹದಿಂದಲೇ ಎರಡನೇ ಬಾರಿಗೆ ಹತ್ಯೆ ಮಾಡಿದ್ದಾರೆ. ಗಾಂಧೀಜಿ ಅವರ ಶ್ರಮ ಸಂಸ್ಕೃತಿಯ ರೂಪದಂತಿರುವ ಮನರೇಗಾ ಯೋಜನೆ ರದ್ದುಪಡಿಸಿ ಹೊಸ ಕಾಯ್ದೆ ತರಲು ಬಿಡುವುದಿಲ್ಲ. ಗಾಂಧೀಜಿ ಅವರ ಹೆಸರನ್ನು ಪಂಚಾಯಿತಿಗಳಿಗೆ ಇಡುತ್ತೇವೆಂದರು. ಇದೇ ವಿಚಾರವಾಗಿ ಚರ್ಚಿಸಲು ವಿಶೇಷ ಅಧಿವೇಶನ ಕರೆದಿದ್ದೇವೆ. ಹೊಸ ಕಾಯ್ದೆ ವಿರುದ್ಧ ನಿರ್ಣಯ ತೆಗೆದುಕೊಳ್ಳುತ್ತೇವೆಂದರು.

**ದೆಹಲಿಯಲ್ಲಿ ಕುಳಿತು ನಿರ್ಧಾರ**

ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಮಾತನಾಡಿ, ಗ್ರಾಮ ಪಂಚಾಯಿತಿಗಳೇ ಉದ್ಯೋಗ ಬೇಡಿಕೆ ಆಧರಿಸಿ ಯೋಜನೆ ರೂಪಿಸಿ ವಾರ್ಷಿಕ ಅನುದಾನ ಪಡೆಯಬಹುದಿತ್ತು. ಹೊಸ ಕಾಯ್ದೆ ಪ್ರಕಾರ ಪಂಚಾಯಿತಿಗಳಿಗೆ ಯೋಜನೆ ನೀಡುವ ಅಧಿಕಾರವೇ ಇರುವುದಿಲ್ಲ. ಕೇಂದ್ರ ಸರ್ಕಾರದ ಅಧಿಕಾರಿಗಳೇ ದೆಹಲಿಯಲ್ಲಿ ಕುಳಿತು ಯೋಜನೆ ರೂಪಿಸಲಿದ್ದಾರೆ. ಯುಪಿಎ ಸರ್ಕಾರ ಜಾರಿಗೊಳಿಸದ ಉದ್ದೇಶವನ್ನೇ ಬಿಜೆಪಿ ಸರ್ಕಾರ ಧ್ವಂಸಗೊಳಿಸಿದೆ ಎಂದರು. ಮುಖ್ಯಮಂತ್ರಿ ಹಾಗು ಉಪಮುಖ್ಯಮಂತ್ರಿ ನೇತೃತ್ವದಲ್ಲಿ ಲೋಕಭವನಕ್ಕೆ ತೆರಳಿ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಾತನಾಡಿ, ಯಾವ ಕಾಮಗಾರಿ ಕೈಗೊಳ್ಳಬೇಕೆಂದು ಈ ಹಿಂದೆ ಪಂಚಾಯಿತಿಗಳು ತೀರ್ಮಾನ ಮಾಡುತ್ತಿದ್ದವು. ಆದರೆ, ಆ ಸ್ವಾತಂತ್ರ್ಯವನ್ನು ಕೇಂದ್ರ ಸರ್ಕಾರ ಕಸಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯೋಜನೆಯಡಿ ಆಶ್ರಯ ಮನೆ, ಇಂದಿರಾ ಆವಾಸ್ ಮನೆ ನಿರ್ಮಾಣ, ದನಗಳ ಕೊಟ್ಟಿಗೆ,

» ನಾಲ್ಕನೇ ಪುಟದಲ್ಲಿ



"ಕೇಂದ್ರ ಬಿಜೆಪಿ ಸರ್ಕಾರ ನರೇಗಾ ಯೋಜನೆ ಅನುದಾನವನ್ನು ಬಾಕಿ ಉಳಿಸಿಕೊಂಡಿದೆ. ಬಿಜೆಪಿ ಆಡಳಿತ ರಾಜ್ಯಗಳಲ್ಲಿ ಕೇಂದ್ರ ಸರ್ಕಾರದ ನೂತನ ಯೋಜನೆ ಅನುಷ್ಠಾನ ಸಾಧ್ಯವಿಲ್ಲ. ಎನ್‌ಡಿಎ ಮೈತ್ರಿ ನಾಯಕ ಚಂದ್ರಬಾಬು ನಾಯ್ಡು ಅವರೇ ಈ ಯೋಜನೆಗೆ ಅಪಸ್ವರ ಎತ್ತಿದ್ದು, ಇದನ್ನು ಜಾರಿ ಸಾಧ್ಯವಿಲ್ಲ ಎಂದಿದ್ದಾರೆ. ಕೇಂದ್ರ ಬಿಜೆಪಿ ಸರ್ಕಾರ ನೂತನ ಕಾಯ್ದೆ ಹಿಂಪಡೆಯದಿದ್ದರೆ ಸರ್ಕಾರಕ್ಕೆ ಆಪತ್ತು ಎದುರಾಗಲಿದೆ.

-ಡಿ.ಕೆ.ಶಿವಕುಮಾರ್, ಡಿಸಿಎಂ

### ಬಹಿರಂಗ ಚರ್ಚೆಗೆ ಡಿ.ಕೆ.ಶಿ. ಆಹ್ವಾನ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಬಿಜೆಪಿ ನಾಯಕರು ನರೇಗಾ ಬಗ್ಗೆ ಚರ್ಚೆಗೆ ಬರಲಿ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪಂಥಾಹ್ವಾನ ನೀಡಿದರು.

ಈ ಯೋಜನೆ ಜಾರಿಯಾಗಿ 20 ವರ್ಷಗಳಿವೆ. ಕಳೆದ 11 ವರ್ಷಗಳಿಂದ ನಿಮ್ಮದೇ ಸರ್ಕಾರ ಅಧಿಕಾರದಲ್ಲಿದೆ. ಈ ಯೋಜನೆಯಲ್ಲಿ ಅಕ್ರಮ ನಡೆದಿದ್ದರೆ ಏನು ಮಾಡುತ್ತಿದ್ದಿರಿ. ನಮ್ಮ ಪಂಚಾಯಿತಿಗಳಲ್ಲಿ ಅಕ್ರಮ ನಡೆದ ಪ್ರಕರಣಗಳಲ್ಲಿ ನಾವು ಕ್ರಮ ಕೈ ಗೊಂಡಿದ್ದೇವೆ. ಯಾರೋ ಕೆಲವರು ತಪ್ಪು ಮಾಡಿದರೆ ಇಡೀ ಯೋಜನೆಯನ್ನೇ ಬದಲಿಸುವುದೇ. ಆ ಮೂಲಕ ಮೂಗು ಕತ್ತರಿಸಿಕೊಳ್ಳುವ ಕೆಲಸ ಮಾಡುವುದು ಸರಿಯೇ ಎಂದು ಕಿಡಿಕಾರಿದರು.

# ವಾರದಲ್ಲಿ ಐದು ದಿನ ಕೆಲಸಕ್ಕೆ ಬ್ಯಾಂಕ್ ನೌಕರರ ಪಟ್ಟು

• ಪ್ರಜೋದಯ ವರದಿ

**ಹಾಸನ:** ವಾರದಲ್ಲಿ ಐದು ದಿನಗಳ ಕೆಲಸದ ವ್ಯವಸ್ಥೆಯನ್ನು ಜಾರಿಗಳಿಸಬೇಕೆಂದು ಒತ್ತಾಯಿಸಿ ಬ್ಯಾಂಕ್ ನೌಕರರು ಮಂಗಳವಾರ ಜಿಲ್ಲಾದ್ಯಂತ ಪ್ರತಿಭಟನೆ ನಡೆಸಿದರು.

ನಗರದ ಎನ್.ಆರ್.ವೃತ್ತದಲ್ಲಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಎದುರು ಜಮಾಯಿಸಿದ ನೂರಾರು ಪ್ರತಿಭಟನಾಕಾರರು ನ್ಯಾಯಯುತ ಬೇಡಿಕೆ ಈಡೇರಿಕೆಗೆ ಆಗ್ರಹಿಸಿದರು. ಭಾರತೀಯ ಬ್ಯಾಂಕ್‌ಗಳ ಸಂಘಟನೆ (ಐಬಿಎ) ಹಾಗು ಬ್ಯಾಂಕ್ ಸಿಬ್ಬಂದಿ ಸಂಘಟನೆಗಳೊಂದಿಗೆ 2024ರಲ್ಲಿ ನಡೆದ 12ನೇ ದ್ವಿಪಕ್ಷೀಯ ಒಪ್ಪಂದದ ಪ್ರಕಾರ ವಾರದಲ್ಲಿ ಐದು ದಿನ ಬ್ಯಾಂಕಿಂಗ್ ಸೌಲಭ್ಯ ಜಾರಿಗೊಳಿಸುವಂತೆ ಆಗ್ರಹಿಸಿದರೂ ಕೇಂದ್ರ ಸರ್ಕಾರ ಮನ್ನಣೆ ನೀಡಿಲ್ಲವೆಂದು ಆರೋಪಿಸಿದರು.

ಒಪ್ಪಂದ ಆದಾಗಿನಿಂದಲೂ ಈ ವ್ಯವಸ್ಥೆಯನ್ನು ಜಾರಿ ಮಾಡಲು ಸರ್ಕಾರಕ್ಕೆ ಒತ್ತಾಯಿಸುತ್ತಿದ್ದರೂ ಸಕಾರಾತ್ಮಕ ಸ್ಪಂದನೆ ಸಿಕ್ಕಿಲ್ಲ. ಸಾರ್ವಜನಿಕರಿಗೆ ಹಾಗು ಬ್ಯಾಂಕ್ ಗ್ರಾಹಕರಿಗೆ ತೊಂದರೆಯಾಗದಂತೆ ಕಳೆದ ಒಂದು ತಿಂಗಳಿಂದ ಅನೇಕ ರೀತಿಯ ಪ್ರತಿಭಟನೆಗಳ ಮೂಲಕ ಸರ್ಕಾರದ ಗಮನ ಸೆಳೆಯಲು ಪ್ರಯತ್ನ ಮಾಡಲಾಯಿತು. ಆದರೆ, ಇದ್ಯಾವುದಕ್ಕೂ ಸ್ಪಂದಿಸದೆ ಸರ್ಕಾರ ನಿರ್ಲಕ್ಷ್ಯ ಧೋರಣೆ ತಳೆದಿದೆ ಎಂದರು.

ದೇಶದ ಎಲ್ಲಾ ಬ್ಯಾಂಕ್ ಸಿಬ್ಬಂದಿ ಒತ್ತಡದಲ್ಲಿ ಕೆಲಸ ಮಾಡುತ್ತಿದ್ದಾರೆ. ಅದರಿಂದ ಆತ್ಮಹತ್ಯೆ, ಖಿನ್ನತೆ, ಕೌಟುಂಬಿಕ ಸಮಸ್ಯೆ ಹಾಗು ಸಾಮಾಜಿಕ ಸಮಸ್ಯೆಗಳು ಉಂಟಾಗುತ್ತಿದೆ. ಇದು ಉತ್ಪಾದಕತೆಯ ಮೇಲೆ ನೇರ ಪರಿಣಾಮ ಬೀರುತ್ತಿದೆ. ಬ್ಯಾಂಕ್ ಸಿಬ್ಬಂದಿ ಮೇಲಿನ ಒತ್ತಡ ಕಡಿಮೆ ಮಾಡಲು ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಅನಿವಾರ್ಯವಾಗಿದೆ. ಈಗಾಗಲೇ ಹಣಕಾಸು ವಲಯದ ಇತರೆ ಸಾರ್ವಜನಿಕ ಸಂಸ್ಥೆಗಳಾದ ಆರ್‌ಬಿಐ, ಎಲ್‌ಐಸಿ, ಸಾಮಾನ್ಯ ವಿಮಾ ಕಂಪನಿಗಳು, ಸೆಬಿ, ಷೇರು ಮಾರುಕಟ್ಟೆ, ವಿದೇಶಿ ವಿನಿಮಯ ಮಾರುಕಟ್ಟೆ ವಾರದಲ್ಲಿ 5 ದಿನಗಳಷ್ಟೇ ಕಾರ್ಯ ನಿರ್ವಹಿಸುತ್ತಿವೆ. ಪ್ರಪಂಚದಾದ್ಯಂತ ಬಹುತೇಕ ದೇಶಗಳಲ್ಲಿ ಬ್ಯಾಂಕ್ ಐದು ದಿನಗಳ ಕಾರ್ಯ » ನಾಲ್ಕನೇ ಪುಟದಲ್ಲಿ





## ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಿಗೆ ಏಕವಚನ: ಕ್ಷಮೆಯಾಚನೆಗೆ ಆಗ್ರಹ

• ಪ್ರಜೋದಯ ವರದಿ

**ಹಾಸನ:** ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಷಡಾಕ್ಷರಿ ಅವರ ಬಗ್ಗೆ ಜಿಲ್ಲಾಧ್ಯಕ್ಷ ಬಾಗೂರು ಕೃಷ್ಣೇಗೌಡ ಅವರು ಏಕವಚನದಲ್ಲಿ ಮಾತನಾಡಿರುವುದು ಖಂಡನೀಯ. ಕೂಡಲೇ ಬಹಿರಂಗ ಕ್ಷಮೆಯಾಚಿಸಬೇಕೆಂದು ರಾಜ್ಯ ಉಪಾಧ್ಯಕ್ಷ ಹಾಗು ನಿರ್ದೇಶಕ ಕೆ.ಎಂ.ಶ್ರೀನಿವಾಸ್ ಅವರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಷಡಾಕ್ಷರಿ ಅವರು ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಬಳಿಕ ನೌಕರರ ಪರವಾಗಿ ಒಳ್ಳೆಯ ಕೆಲಸ ಮಾಡಿದ್ದಾರೆ. ಅಂತಹವರ ಬಗ್ಗೆ ಲಘು ಮಾತು ಸರಿಯಲ್ಲವೆಂದರು.

ನೌಕರರ ಸಂಘಗಳು ಏನೇ ಮಾಡಿದರೂ ಬೈಲಾ ನಿಯಮಾವಳಿ ಅಡಿಯಲ್ಲೇ ಕೆಲಸ ಮಾಡಬೇಕು. ಅದಕ್ಕೂ ಮುನ್ನ ಸಭೆಯಲ್ಲಿ ಚರ್ಚೆ ಮಾಡಬೇಕು, ಬೈಲಾ ಪ್ರಕಾರ ಎಲ್ಲರ ಸಮ್ಮತಿ ಮೇರೆಗೆ ಅಭಿವೃದ್ಧಿ ಕೆಲಸ ಮಾಡುವುದು ತಪ್ಪಲ್ಲ. ಜಿಲ್ಲೆಯ ಕೆಲವರಿಂದ ರಾಜ್ಯಾಧ್ಯಕ್ಷರು ದೂರು ಬರೆಸಿಕೊಂಡಿದ್ದಾರೆಂಬುದು ತಪ್ಪು ಕಲ್ಪನೆ. ಕಟ್ಟಡ ದುರಸ್ತಿ ಮಾಡಿ ಬಾಡಿಗೆ ಕೊಡಲು ರಾಜ್ಯಾಧ್ಯಕ್ಷರು ಅನುಮತಿ ಕೊಡುತ್ತಿಲ್ಲ ಎನ್ನುವವರು, ಕಟ್ಟಡವನ್ನು ಕೆಡವುವಾಗ ಯಾರ ಅನುಮತಿ ಪಡೆದಿದ್ದರು. ಸ್ವಂತ ಹಣದಲ್ಲಿ ನವೀಕರಣ ಮಾಡುತ್ತಿದ್ದೇವೆ ಎನ್ನುವವರು ಮಾಡಿ ಮುಗಿಸಲಿ, ಅದಕ್ಕೆ ಯಾರ ಅನುಮತಿ ಬೇಕಿಲ್ಲವೆಂದರು.

ಸರಿಯಾದ ಕ್ರಮದಲ್ಲಿ ಮನವಿ ಸಲ್ಲಿಸಿ ಅನುಮೋದನೆ ಪಡೆಯಿರಿ ಎಂದು ರಾಜ್ಯಾಧ್ಯಕ್ಷರು ಪತ್ರ ಬರೆದಿದ್ದಾರೆ ಹೊರತು ಅಭಿವೃದ್ಧಿ ಕಾಮಗಾರಿಗೆ ಅಡ್ಡಿಯಾಗಿಲ್ಲ. ರಾಜ್ಯಾಧ್ಯಕ್ಷರು ರಿಪೇರಿ ನಿಲ್ಲಿಸಿ ಎಂದಿಲ್ಲ. ಕಟ್ಟಡ ಬೀಳಿಸುವಾಗ ಬೇಡವಾದ ಅನುಮತಿ ಈಗ ಏಕೆ ಬೇಕೆಂದು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಜೆ.ಪಿ. ವಿಶ್ವನಾಥ್, ರಾಜ್ಯ ಪರಿಷತ್ ಸದಸ್ಯ ಹಾಗು ಸಂಘಟನಾ ಕಾರ್ಯದರ್ಶಿ ಟಿ.ರಾಜು ಇದ್ದರು.





# ಎತ್ತಿನಹೊಳೆ ಹೆಸರಲ್ಲಿ ಜನರ ತೆರಿಗೆ ಹಣ ವ್ಯಯ

## ಆಲೂರು ವ್ಯಾಪ್ತಿಯಲ್ಲಿ ಚಾನಲ್ ತಡೆಗೋಡೆ ಕುಸಿತ | ಎಂಎಲ್‌ಸಿ ಸೂರಜ್ ಪರಿಶೀಲನೆ

• ಪ್ರಜೋದಯ ವರದಿ

**ಆಲೂರು:** ಎತ್ತಿನಹೊಳೆ ಯೋಜನೆ ಹೆಸರಿನಲ್ಲಿ ರಾಜ್ಯ ಸರ್ಕಾರ ಸಾರ್ವಜನಿಕರ ಕೋಟ್ಯಾಂತರ ರೂಪಾಯಿ ತೆರಿಗೆಯನ್ನು ನೀರಿನಲ್ಲಿ ಹೋಮ ಮಾಡಿದಂತಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರು ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನಲ್ಲಿ ಹಾದು ಹೋಗಿರುವ ಎತ್ತಿನಹೊಳೆ ಯೋಜನೆ ನಾಲೆ ಪ್ರದೇಶದಲ್ಲಿ ಚಾನಲ್ ತಡೆಗೋಡೆ ಕುಸಿದಿರುವ ಪ್ರದೇಶಗಳಿಗೆ ಮಂಗಳವಾರ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಯಲು ಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರು ಕಲ್ಪಿಸುವ ಉದ್ದೇಶದಿಂದ ಕೈಗೊಂಡ ಬೃಹತ್ ಯೋಜನೆ ಹಳ್ಳ ಹಿಡಿದಿದೆ. ಕಳಪೆ ಕಾಮಗಾರಿಯಿಂದ ತೆರಿಗೆದಾರರು ಹಾಗು ವ್ಯಾಪ್ತಿಯ ರೈತರು ಪರಿತಪಿಸುವಂತಾಗಿದೆ ಎಂದರು.

ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಯ ಸುಮಾರು 68 ಲಕ್ಷ ಜನರಿಗೆ ಕುಡಿಯುವ ನೀರು ಒದಗಿಸುವುದು ಯೋಜನೆಯ ಮುಖ್ಯ ಉದ್ದೇಶ. ತಾಲ್ಲೂಕಿನ ಕೆಲವು ಆಯ್ದ ಗ್ರಾಮಗಳಲ್ಲಿ ಯೋಜನೆಯ ಕಾಲುವೆಗಳಲ್ಲಿ ನೀರು ಹರಿಯುವ ಮುನ್ನವೇ ನಾಲೆಗಳು ಅಲ್ಲಲ್ಲಿ ಕುಸಿದು ಹೋಗಿವೆ. ಕಳಪೆ ಕಾಮಗಾರಿಗೆ ಹಿಡಿದ ಕೈಗನ್ನಡಿಯಂತಿದೆ. ಈ ಪ್ರದೇಶಗಳಿಗೆ ಜಲ ಸಂಪನ್ಮೂಲ ಸಚಿವರು ಹಾಗು ಜಿಲ್ಲಾ ಉಸ್ತುವಾರಿ ಸಚಿವರು ಭೇಟಿ ನೀಡಿ ಆಗಿರುವ ಬೇಜವಾಬ್ದಾರಿತನಕ್ಕೆ ಹೊಣೆಗಾರರಾಗಿರುವವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಎತ್ತಿನಹೊಳೆ ಯೋಜನೆಯು ಆರ್ಥಿಕವಾಗಿ ಅತಿ ದೊಡ್ಡ ಮೊತ್ತದ ಯೋಜನೆಯಾಗಿದೆ. ಆರಂಭಿಕ ಅಂದಾಜು ವೆಚ್ಚ ಸುಮಾರು 13 ಸಾವಿರ ಕೋಟಿ ರೂ. (2012-14ರ ಅವಧಿಯಲ್ಲಿ) ಪರಿಷ್ಕೃತ ಅಂದಾಜು ವೆಚ್ಚ ಪ್ರಸ್ತುತ ಈ ಯೋಜನೆಯ ಅಂದಾಜು ವೆಚ್ಚವು 23 ಸಾವಿರ ಕೋಟಿ ರೂ. ತಲುಪಿದೆ. ಇತ್ತೀಚಿನ ವರದಿಗಳ ಪ್ರಕಾರ, ಸರ್ಕಾರವು ಈವರೆಗೆ ಸುಮಾರು 15 ರಿಂದ 16 ಸಾವಿರ ಕೋ.ರೂ. ಖರ್ಚು ಮಾಡಲಾಗಿದೆ. ಆದರೂ ಕಾಮಗಾರಿಯಲ್ಲಿ ಗುಣಮಟ್ಟ ಕಾಪಾಡಿಕೊಂಡಿಲ್ಲವೆಂದರು.

ಅಗತ್ಯ ಕಬ್ಬಿಣ ಸೇರಿ ಮೂಲಭೂತ ವಸ್ತುಗಳನ್ನು ಬಳಕೆ ಮಾಡದೆ ಅಸಡ್ಡೆ ಮತ್ತು ಬೇಜವಾಬ್ದಾರಿ ಕಾಮಗಾರಿ ನಡೆಸಲಾಗಿದೆ. ಯೋಜನೆಯ ಶೇ.70ರಷ್ಟು ಭಾಗದಲ್ಲಿನ ತಡೆಗೋಡೆಗಳು ಸಂಪೂರ್ಣವಾಗಿ ಕುಸಿದು ಬಿದ್ದಿವೆ. ಒಡೆದು ಹೋಗಿರುವುದು ಕಾಮಗಾರಿಯ ಗುಣಮಟ್ಟವನ್ನು ಬಯಲು ಮಾಡುತ್ತಿದೆ. ಲೋಪದ ಹೊಣೆಯನ್ನು ಹೊರುವುದು ಯಾರೆಂದು ಪ್ರಶ್ನಿಸಿದರು.

ಮಾಜಿ ಸಚಿವ ಹೆಚ್.ಕೆ. ಕುಮಾರಸ್ವಾಮಿ, ಹೆಚ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಕೆ.ಎಸ್.ಮಂಜೇಗೌಡ, ಹಾಮೂಲ್ ನಿರ್ದೇಶಕ ಪಿ.ಎಲ್.ನಿಂಗರಾಜು, ಎಸ್.ಎನ್.ಪ್ರಕಾಶ್, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಸಿ.ವಿ.ಲಿಂಗರಾಜು, ಮುಖಂಡರಾದ ಓಂಕಾರ ಮೂರ್ತಿ, ಶಾಂತರಾಜು, ನಿಂಗರಾಜು, ರಾಜಣ್ಣ ಉಪಸ್ಥಿತರಿದ್ದರು.



"ಎತ್ತಿನಹೊಳೆ ಕಳಪೆ ಕಾಮಗಾರಿಗೆ ಇಲಾಖೆಯ ಅಧಿಕಾರಿಗಳು ಅಥವಾ ಗುತ್ತಿಗೆದಾರರು ಈ ಇಬ್ಬರಲ್ಲಿ ಕಾರಣ ಯಾರೆಂಬುದು ಬಹಿರಂಗವಾಗಬೇಕು. ರಾಜ್ಯ ಸರ್ಕಾರ ಕೂಡಲೇ ಪರಿಶೀಲನಾ ಸಮಿತಿ ರಚಿಸಿ ಶೀಘ್ರ ವರದಿ ಪಡೆಯಬೇಕು. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು.

-ಹೆಚ್.ಕೆ.ಕುಮಾರಸ್ವಾಮಿ, ಮಾಜಿ ಸಚಿವ

## ಜ.31 ರಂದು ಸಕಲೇಶಪುರ ಪುರಸಭೆ ಪೂರ್ವಭಾವಿ ಸಭೆ

• ಪ್ರಜೋದಯ ವರದಿ

**ಸಕಲೇಶಪುರ :** ಪಟ್ಟಣದ ಪುರಸಭೆಯ ಸಭಾಂಗಣದಲ್ಲಿ ಆಡಳಿಧಿಕಾರಿಗಳು ಮತ್ತು ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜ.31 ರಂದು ಬೆಳಿಗ್ಗೆ 11 ಗಂಟೆಗೆ 2026-27 ನೇ ಸಾಲಿನ ಆಯವ್ಯಯ ಮಂಡನೆ ಮಾಡಲು ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ.

ಸಭೆಗೆ ಸಾರ್ವಜನಿಕರು, ಸಂಘ-ಸಂಸ್ಥೆಗಳ ಕಾರ್ಯಕರ್ತರು ಆಗಮಿಸಿ ಪಟ್ಟಣದ ಸರ್ವತೋಮುಖ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಲಹೆ, ಸೂಚನೆಗಳನ್ನು ನೀಡಬೇಕಾಗಿ ಪುರಸಭೆ ಮುಖ್ಯಾಧಿಕಾರಿ ಅವರು ತಿಳಿಸಿದ್ದಾರೆ.

## ಜನ ಸಂಪರ್ಕ ಸಭೆ

• ಪ್ರಜೋದಯ ವರದಿ

ಹಾಸನ : ತಾಲ್ಲೂಕು ಮಟ್ಟದ ಜನ ಸಂಪರ್ಕ ಸಭೆಯನ್ನು ಜ. 29 ರಂದು ಬೆಳಿಗ್ಗೆ 11 ಗಂಟೆಗೆ ತಾಲ್ಲೂಕು ಪಂಚಾಯಿತಿ ಕಾರ್ಯಾಲಯ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕ ಹೆಚ್.ಎಸ್. ಸುರೇಶ್ ಅಧ್ಯಕ್ಷತೆಯಲ್ಲಿ ಸಭೆಯನ್ನು ಏರ್ಪಡಿಸಲಾಗಿದೆ.

# ವೃತ್ತಿಯ ಶ್ರದ್ಧೆ, ನಿಷ್ಠೆಯನ್ನು ಗೌರವಿಸಬೇಕು : ಎಚ್.ಎಲ್.ಮಲ್ಲೇಶ್ ಗೌಡ

• ಪ್ರಜೋದಯ ವರದಿ

**ಹಾಸನ :** ಸಮಾಜದಲ್ಲಿ ಯಾವ ವೃತ್ತಿಯಲ್ಲಿ ಮೇಲು ಕೀಳು ಇರಬಾರದು. ಪ್ರತಿಯೊಬ್ಬರ ವೃತ್ತಿಯ ಶ್ರದ್ಧೆ, ನಿಷ್ಠೆಯನ್ನು ಗೌರವಿಸಬೇಕೆಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಚ್.ಎಲ್.ಮಲ್ಲೇಶ್ ಗೌಡ ಅವರು ತಿಳಿಸಿದ್ದಾರೆ

ಹಾಸನಾಂಬ ಕಲಾಕ್ಷೇತ್ರದಲ್ಲಿ ಮಂಗಳವಾರ ನಡೆದ ಶ್ರೀ ಸವಿತಾ ಮಹರ್ಷಿ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಬ್ರಹ್ಮನ ಸೃಷ್ಟಿ ಶ್ರೇಷ್ಠವಾದದ್ದು. ಸವಿತಾ ಸಮಾಜದ ವೃತ್ತಿಯನ್ನು ಗೌರವಿರಬೇಕು, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಸವಿತಾ ಸಮಾಜ ಗೌರವವನ್ನು ಹೊಂದಿದೆ. ಭೌತಿಕತೆ, ಜ್ಞಾನ ಯಾವುದೇ ಒಂದು ಜಾತಿ, ಧರ್ಮಕ್ಕೆ ಸೀಮಿತವಲ್ಲ, ಎಲ್ಲಾ ಇಂತಹ ಜಯಂತಿಯ ಆಚರಣೆಯ ಮೂಲಕ ಮಹರ್ಷಿಯವರ ಮುಂದಿನ ಪೀಳಿಗೆ ಕೊಂಡೊಯ್ಯಬೇಕೆಂದು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಹಾಯಕ ರಮೇಶ ಅವರು ಮಾತನಾಡಿ, ಸವಿತಾ ಮಹರ್ಷಿಯವರು ನೆನಪಿಕೊಂಡು ಗೌರವ ಸಲ್ಲಿಸುವ ಕೆಲಸವಾಗಬೇಕು, ಯಾವುದೇ ವೃತ್ತಿಯಲ್ಲಿ ಕೌಶಲ್ಯವಿದ್ದರೆ ಗೌರವ ಸಿಗುತ್ತದೆ, ಕೌಶಲ್ಯ ಭರಿತ ಕೆಲಸ ನಿರ್ವಸಬೇಕು. ಜ್ಞಾನವನ್ನು ಆಧಾರವಾಗಿಟ್ಟುಕೊಂಡು ಶಿಕ್ಷಣದ ಜ್ಞಾನವನ್ನು ಪಡೆದು ಗೌರವ ಕೊಡುವ ರೀತಿಯಲ್ಲಿ ನಮ್ಮನ್ನು ನಾವು ತೊಡಗಿಸಿಕೊಳ್ಳಬೇಕು. ಬೇರೆ ಬೇರೆ ರೀತಿಯಲ್ಲಿ ಉನ್ನತ ಸ್ಥಾನ ಪಡೆಯಬೇಕು ಎಂದರು.

ಸಾಹಿತಿಗಳಾದ ಪವನ್ ಆಲೂರು ಮಾತನಾಡಿ, ಶೋಷಿತ ವರ್ಗದವರನ್ನು ಶೈಕ್ಷಣಿಕವಾಗಿ ಮೇಲೆ ತರಲು ಪರಶಿವನ ಬಲಗಣ್ಣಿನಿಂದ ಜನಿಸಿದವರಾಗಿದ್ದು, ಸೂರ್ಯವಂಶದ ಕುಲದೈವರಾಗಿದ್ದಾರೆ. ಅಪಾರ ಜ್ಞಾನ ಹೊಂದಿದ್ದರೆಂದು ತಿಳಿಸಿದರು. ಸವಿತಾ ಮಹರ್ಷಿ ಅವರ ಕುರಿತು ಉಪನ್ಯಾಸ ನೀಡಿದರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ತಾರಾನಾಥ್, ಜಿಲ್ಲಾ ಸವಿತಾ ಸಮಾಜದ ಅಧ್ಯಕ್ಷ ರವಿಕುಮಾರ್, ತಾಲ್ಲೂಕು ಅಧ್ಯಕ್ಷ ವೆಂಕಟೇಶ್ ಇತರರಿದ್ದರು.





# ಬಜೆಟ್ ಅಧಿವೇಶನದಲ್ಲಿ ನರೇಗಾ ಚರ್ಚೆಗೆ ಪ್ರತಿಪಕ್ಷ ಆಗ್ರಹ

• ಪ್ರಜೋದಯ ವರದಿ

**ನವದೆಹಲಿ:** ಸಂಸತ್ತಿನ ಬಜೆಟ್ ಅಧಿವೇಶನಕ್ಕೂ ಮೊದಲು ಮಂಗಳವಾರ ನಡೆದ ಸರ್ವಪಕ್ಷ ಸಭೆಯಲ್ಲಿ ವಿರೋಧ ಪಕ್ಷಗಳು ನರೇಗಾ ಪುನಃ ಸ್ಥಾಪನೆ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್), ಭಾರತದ ವಿದೇಶಾಂಗ ನೀತಿ ವಿಷಯಗಳ ಕುರಿತು ರಚನಾತ್ಮಕ ಚರ್ಚೆಗೆ ಆಗ್ರಹಿಸಿದವು.

ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು, ಹೊಸದಾಗಿ ಜಾರಿಗೆ ತರಲಾದ ವಿಬಿ-ಜಿ ರಾಮ್ ಜಿ ಕಾನೂನು ಹಿಂಪಡೆಯುವುದು ಅಸಾಧ್ಯವೆಂದು ಸ್ಪಷ್ಟಪಡಿಸಿದ್ದಾರೆ. ಬಜೆಟ್ ಅಧಿವೇಶನದ ಪ್ರಾಥಮಿಕ ಗಮನ ಬಜೆಟ್ ಆಗಿರುತ್ತದೆ. ರಾಷ್ಟ್ರಪತಿಗಳ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯ ಸಮಯದಲ್ಲಿ ಸದಸ್ಯರು ಇತರ ವಿಷಯಗಳನ್ನು ಚರ್ಚಿಸಬಹುದೆಂದರು.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ

» ನಾಲ್ಕನೇ ಪುಟದಲ್ಲಿ



## ಕಾಂಗ್ರೆಸ್ ಭವನ ಕಾಮಗಾರಿ: ಎಐಸಿಸಿಗೆ ಮಾಹಿತಿ

• ಪ್ರಜೋದಯ ವರದಿ

**ಬೆಂಗಳೂರು:** ಕಾಂಗ್ರೆಸ್ ಪಕ್ಷದ ನೂರು ಕಚೇರಿಗಳ ನಿರ್ಮಾಣ ವಿಚಾರದಲ್ಲಿ ಆಸಕ್ತಿ ತೋರಿರುವ ಮತ್ತು ತೋರದವರ ಕುರಿತು 2 ದಿನಗಳಲ್ಲಿ ಎಐಸಿಸಿ ನಾಯಕರಿಗೆ ಮಾಹಿತಿ ನೀಡುತ್ತೇನೆಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ಲಿಖಿತ ಮಾಹಿತಿ ನೀಡುವಂತೆ ವರಿಷ್ಠರು ಸೂಚಿಸಿದ್ದಾರೆ. ಯಾವ ತಾಲ್ಲೂಕಿನಲ್ಲಿ ಕಚೇರಿ ಆಗಿದೆ, ಎಲ್ಲಿ ಆಗಿಲ್ಲ, ಕಚೇರಿ ನಿರ್ಮಾಣ ವಿಚಾರದಲ್ಲಿ ಯಾರು ಆಸಕ್ತಿ ವಹಿಸಿದ್ದಾರೆ, ಯಾರು ಆಸಕ್ತಿ ವಹಿಸಿಲ್ಲ ಎನ್ನುವುದನ್ನು ಸಭೆಯಲ್ಲಿ ಚರ್ಚಿಸಲಾಯಿತು ಎಂದರು.

ರಾಜ್ಯದಲ್ಲಿರುವ ಪಕ್ಷದ ಆಸ್ತಿ, ದಾಖಲೆ, ತೆರಿಗೆ ಪಾವತಿ ಸೇರಿ ಅನೇಕ ಅಂಶಗಳ ಬಗ್ಗೆ ಸಭೆಯಲ್ಲಿ ಪರಿಶೀಲನೆ ನಡೆಸಲಾಗಿದೆ. ನೂತನ ಕಚೇರಿ ನಿರ್ಮಾಣ ಪ್ರಕ್ರಿಯೆ ಯಾವ ಹಂತದಲ್ಲಿದೆ ಎಂದು ಎಐಸಿಸಿ ನಾಯಕರು ಮಾಹಿತಿ ಪಡೆದಿದ್ದಾರೆ ಎಂದರು.

## ಸೀಡ್ ವಿಲ್ಲೇಜ್ ಪ್ರೊಡಕ್ಷನ್ ಯೋಜನೆ | ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ತಯಾರಿ

# ಆಲೂಗೆಡ್ಡೆ ಪುನಶ್ಚೇತನಕ್ಕೆ ನೂತನ ಪ್ರಯೋಗಕ್ಕೆ ಸಿದ್ಧತೆ

• ಪ್ರಜೋದಯ ವರದಿ

**ಹಾಸನ:** ವರ್ಷದಿಂದ ವರ್ಷಕ್ಕೆ ವಿಸ್ತಾರ ಕಡಿಮೆ ಮಾಡಿಕೊಳ್ಳುತ್ತಿರುವ ಆಲೂಗೆಡ್ಡೆಗೆ ಪುನಶ್ಚೇತನ ನೀಡಬೇಕೆಂದು ತೋಟಗಾರಿಕೆ ಇಲಾಖೆ ಮುಂದಾಗಿದ್ದು, ಗ್ರಾಮಗಳಲ್ಲಿ ನೂತನ ಪ್ರಯೋಗಕ್ಕೆ ಮುಂದಾಗಿದೆ.

ಸೀಡ್ ವಿಲ್ಲೇಜ್ ಪ್ರೊಡಕ್ಷನ್ ಟೆಕ್ನಾಲಜಿಸ್ ಮೂಲಕ ರೈತರನ್ನೇ ಬೀಜೋತ್ಪಾದನೆಯಲ್ಲಿ ತೊಡಗುವಂತೆ ಮಾಡಲು ನಿರ್ಧರಿಸಲಾಗಿದೆ. ಈ ನಿಟ್ಟಿನಲ್ಲಿ ತೋಟಗಾರಿಕೆ ಇಲಾಖೆ, ಸೋಮನಹಳ್ಳಿ ಕಾವಲು ತೋಟಗಾರಿಕೆ ಸಂಶೋಧನಾ ಹಾಗು ವಿಸ್ತರಣಾ ಕೇಂದ್ರ, ಕೃಷಿ ವಿಜ್ಞಾನಿಗಳು ಹಲವು ಸುತ್ತಿನ ಚರ್ಚೆ ನಡೆಸಿದ್ದಾರೆ. ಆಲೂಗೆಡ್ಡೆಗೆ ಪುನಶ್ಚೇತನ ನೀಡಬೇಕೆಂಬ ಉದ್ದೇಶದಿಂದ ಕಳೆದ ಒಂದು ತಿಂಗಳಿನಿಂದ ರೈತರು, ವರ್ತಕರೊಂದಿಗೆ ಕಾರ್ಯಾಗಾರ, ಜಿಲ್ಲಾ ಕೇಂದ್ರದಲ್ಲಿ ಎರಡು ದಿನಗಳ ರಾಜ್ಯ ಮಟ್ಟದ ಆಲೂಗೆಡ್ಡೆ ಮೇಳ ನಡೆಸಿದ್ದು, ರೈತರಿಂದ ಬೆಂಬಲ ವ್ಯಕ್ತವಾಗಿದೆ.

**ಆರ್‌ಕೆವಿವೈ ನೆರವಿಗೆ ಮೊರೆ**

50 ಸಾವಿರ ಹೆಕ್ಟೇರ್‌ನಿಂದ ಆಲೂಗೆಡ್ಡೆ ಬಿತ್ತನೆ ಪ್ರದೇಶ ಪ್ರಸ್ತುತ 5 ಸಾವಿರ ಹೆಕ್ಟೇರ್‌ಗೆ ಕುಸಿದಿದ್ದು, ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆ ಸಂಪೂರ್ಣವಾಗಿ ಕಣ್ಮರೆಯಾಗುವ ಸಾಧ್ಯತೆ ಇದೆ. ಅಂಗಮಾರಿ ರೋಗ, ಹವಾಮಾನ ವೈಪರೀತ್ಯ, ಕಳಪೆ ಬಿತ್ತನೆ ಆಲೂಗೆಡ್ಡೆ ವಿತರಣೆ ಹಾಗು ವೈಜ್ಞಾನಿಕ ಪದ್ಧತಿ ಅಳವಡಿಸಿಕೊಳ್ಳದಿರುವುದು ಆಲೂಗೆಡ್ಡೆ ಇಳುವರಿ ಹಿನ್ನಡೆಗೆ ಕಾರಣವಾಗಿದೆ. ಜಿಲ್ಲೆಯ ರೈತರು ಬಿತ್ತನೆ ಆಲೂಗೆಡ್ಡೆಗಾಗಿ ಪಂಜಾಬ್‌ನ ಜಲಂಧರ್ ಪ್ರದೇಶವನ್ನೇ ಅವಲಂಬಿಸಿದ್ದಾರೆ. ವರ್ತಕರು ಸಹ ಅಲ್ಲಿನ ವರ್ತಕರೊಂದಿಗೆ ಶಾಮೀಲಾಗಿ ರೈತರಿಗೆ ಸಾಲ ಸೌಲಭ್ಯದ ಆಮಿಷವೊಡ್ಡಿ ತಮ್ಮ ಬೇಳೆ ಬೇಯಿಸಿಕೊಳ್ಳುತ್ತಾರೆ. ಆರಂಭದಲ್ಲಿ ಜಲಂಧರ್‌ನ ಬಿತ್ತನೆ ಆಲೂಗೆಡ್ಡೆ ಲಾಭದಾಯಕ ಎನಿಸಿದರೂ ಇತ್ತೀಚಿನ ದಿನಗಳಲ್ಲಿ ಅದರಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆಯಾಗಿರುವುದು ಹಾಗು ಮಣ್ಣಿನ ಫಲವತ್ತತೆ ಹಾಳಾಗಿರುವುದರಿಂದ ನಿರೀಕ್ಷಿತ ಪ್ರಮಾಣದಲ್ಲಿ ರೈತರು ಲಾಭ ಪಡೆಯಲು ಸಾಧ್ಯವಾಗುತ್ತಿಲ್ಲ. (ನಾಲ್ಕನೇ ಪುಟದಲ್ಲಿ)





### ಆಲೂಗೆಡ್ಡೆ ಮೇಳಕ್ಕೆ ಸಕಾರಾತ್ಮಕ ಸ್ಪಂದನೆ

ತೋಟಗಾರಿಕೆ ಇಲಾಖೆ, ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಆಕಾಶವಾಣಿ ಹಾಗು ಆಲೂಗೆಡ್ಡೆ ವರ್ತಕರ ಸಹಕಾರದಿಂದ ಹಮ್ಮಿಕೊಂಡಿದ್ದ ಎರಡು ದಿನಗಳ ರಾಜ್ಯ ಮಟ್ಟದ ಆಲೂಗೆಡ್ಡೆ ಮೇಳಕ್ಕೆ ರೈತರಿಂದ ಸಕಾರಾತ್ಮಕ ಸ್ಪಂದನೆ ವ್ಯಕ್ತವಾಯಿತು. ಮಂಗಳವಾರ ಬೆಳಿಗ್ಗೆಯಿಂದಲೂ ಸಂಜೆ ತನಕ ಜಿಲ್ಲೆಯ ವಿವಿಧ ಭಾಗದಿಂದ ರೈತರು ಆಗಮಿಸಿ ಮಾಹಿತಿ ಪಡೆದರು. ಪಂಜಾಬ್‌ನ ಜಲಂಧರ್ ಹಾಗು ಸ್ಥಳೀಯ ವರ್ತಕರು ತೆರೆದಿದ್ದ ಮಳಿಗೆಗಳಿಗೆ ಭೇಟಿ ನೀಡಿ ಮಾಹಿತಿ ಪಡೆದರು. ಬೆಂಗಳೂರು ತೋಟಗಾರಿಕೆ ಮಹಾವಿದ್ಯಾಲಯ ಪ್ರಾಧ್ಯಾಪಕ ಡಾ.ಹೆಚ್. ಅಮರನಂಜುಂಡೇಶ್ವರ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಯೋಗೇಶ್ ಮತ್ತಿತರರು ರೈತರಿಗೆ ಮಾಹಿತಿ ನೀಡಿದರು.

## ರಾಚೇನಹಳ್ಳಿ ಶಾಲೆಗೆ ಶಾಸಕ ಸ್ವರೂಪ್ ಭೇಟಿ, ಪರಿಶೀಲನೆ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ರಾಚೇನಹಳ್ಳಿ ಸರ್ಕಾರಿ ಶಾಲೆಗೆ ಶಾಸಕ ಹೆಚ್.ಪಿ. ಸ್ವರೂಪ್ ಅವರು ಮಂಗಳವಾರ ದಿಢೀರ್ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಿದರು.

ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ ಶಿಕ್ಷರರೊಂದಿಗೆ ಮಾಹಿತಿ ಪಡೆದು ಶೀಘ್ರ ಪರಿಹಾರ ಕ್ರಮ ಕೈಗೊಳ್ಳುವ ಭರವಸೆ ನೀಡಿದ ಅವರು, ಹೊಸ ಕಟ್ಟಡಗಳ ಅಗತ್ಯತೆ ಬಗ್ಗೆ ಚರ್ಚಿಸಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು. ಗುಣಮಟ್ಟದ ಆಹಾರ ವಿತರಣೆ ಮಾಡಬೇಕು. ಖಾಸಗಿ ಶಾಲೆಗೆ ಸ್ಪರ್ಧೆ ಒಡ್ಡುವ ನಿಟ್ಟಿನಲ್ಲಿ ಕ್ರೀಡೆ, ಸಾಂಸ್ಕೃತಿಕ, ಶಿಕ್ಷಣ ಎಲ್ಲಾ ವಿಚಾರದಲ್ಲಿಯೂ ಮಕ್ಕಳು ಮುಂಚೂಣಿಗೆ ಬರಬೇಕು. ಈ ನಿಟ್ಟಿನಲ್ಲಿ ಶಿಕ್ಷಕರು ಶ್ರಮ ವಹಿಸಬೇಕೆಂದು ಸೂಚಿಸಿ, ಕುಂದು ಕೊರತೆಗಳನ್ನು ಶೀಘ್ರದಲ್ಲಿ ಪರಿಹರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ಗ್ರಾಮದಲ್ಲಿ ಆಂಜನೇಯ ಸ್ವಾಮಿ ದೇವಾಲಯದ ಅಭಿವೃದ್ಧಿಗೆ 5 ಲ.ರೂ. ಹಣ ನೀಡಲಾಯಿತು. ಕಳೆದ ಹಲವು ದಿನಗಳಿಂದ ದುರಸ್ತಿಯಲ್ಲಿದ್ದ ದೇವಾಲಯ ಗಮನಿಸಿ ಸ್ಥಳೀಯರ ಮನವಿ ಮೇರೆಗೆ ಮುಂದಾಗಿದ್ದೇನೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸಹಾಯ ಮಾಡುವ ಮೂಲಕ ದೇವಾಲಯದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದೆಂದು ಭರವಸೆ ನೀಡಿದರು.



# ರಸ್ತೆ ಅಭಿವೃದ್ಧಿ ದೇಶದ ಆರ್ಥಿಕತೆಯ ಬೆನ್ನೆಲುಬು

## ಚಿಕ್ಕಂದೂರು ಬಳಿ 3 ಕೋಟಿ ರೂ. ವೆಚ್ಚದ ರಸ್ತೆ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಭೂಮಿ ಪೂಜೆ

• ಪ್ರಜೋದಯ ವರದಿ

**ಸಕಲೇಶಪುರ:** ರಸ್ತೆ ಅಭಿವೃದ್ಧಿಯು ದೇಶದ ಆರ್ಥಿಕತೆಯ ಬೆನ್ನೆಲುಬಾಗಿದ್ದು, ಸುಗಮ ಸಂಚಾರ, ಕೃಷಿ ಉತ್ಪನ್ನಗಳಿಗೆ ಮಾರುಕಟ್ಟೆ ಪ್ರವೇಶ ಹಾಗೂ ಉದ್ಯೋಗ ಸೃಷ್ಟಿಯ ಮೂಲಕ ಸಮಗ್ರ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ತಾಲ್ಲೂಕಿನ ಉಚ್ಚಂಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಂದೂರು ಬಳಿ ಸುಮಾರು 3 ಕೋಟಿ ರೂ. ವೆಚ್ಚದ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ ಅಭಿವೃದ್ಧಿ ಪ್ರಗತಿಯ ಸಂಕೇತವಾಗಿದ್ದು, ನಾಗರಿಕರ ದೈನಂದಿನ ಸಂಚಾರಕ್ಕೆ ಇದು ಅತ್ಯಂತ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಹಲವು ವರ್ಷಗಳಿಂದ ಹದಗೆಟ್ಟಿರುವ ರಸ್ತೆಗಳ



ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಮುಖ್ಯ ರಸ್ತೆಯಾದ ಐಗೂರುನಿಂದ ಚಿಕ್ಕಂದೂರುವರೆಗಿನ ರಸ್ತೆ ತೀರ ಹದಗೆಟ್ಟಿದ್ದು, ಇದೀಗ ಸುಮಾರು 3 ಕೋಟಿ ರೂ. ವೆಚ್ಚದಲ್ಲಿ ಮರು ಡಾಂಬರೀಕರಣ ಕಾಮಗಾರಿ ಆರಂಭಗೊಳ್ಳಲಿದೆ. ಈ ರಸ್ತೆ ಅಭಿವೃದ್ಧಿಯಿಂದ ಸರಗಳ್ಳಿ ಹಾಗೂ ಬಾಳೆಕೆರೆ ವೃತ್ತಗಳ ಅಗಲೀಕರಣ ಸಾಧ್ಯವಾಗಲಿದೆ ಎಂದು ಹೇಳಿದರು.

ರಾಜ್ಯ ಹೆದ್ದಾರಿ- 8 (ಹಿರಿಸಾವೆ ತಟ್ಟಹಳ್ಳಿ) ಹಾಗೂ ರಾಜ್ಯ ಹೆದ್ದಾರಿ-277 (ಕೆಂಪುಹೊಳೆಕಣ್ಣೂರು)ಗಳನ್ನು ಸಂಪರ್ಕಿಸುವ ಈ ಜಿಲ್ಲಾ ಮುಖ್ಯ ರಸ್ತೆಯನ್ನು ಉತ್ತಮ ಗುಣಮಟ್ಟದಲ್ಲಿ ಅಭಿವೃದ್ಧಿಪಡಿಸಲಾಗುವುದು. ಕಾಮಗಾರಿಯ ವೇಳೆ ರಸ್ತೆ ಎರಡೂ ಬದಿಗಳ ಚರಂಡಿಗಳ ಸ್ವಚ್ಛತೆ, ತೋಳು ಚರಂಡಿ ನಿರ್ಮಾಣ ಹಾಗೂ ರಸ್ತೆಗೆ ಹೊಂದಿಕೊಂಡಿರುವ ಗಿಡಗಂಟಿಗಳನ್ನು ತೆರವುಗೊಳಿಸುವ ಕೆಲಸ ಕೈಗೊಳ್ಳಲಾಗುವುದು ಎಂದು ಅವರು ಮಾಹಿತಿ ನೀಡಿದರು.

ಕಿರಿಕೊಡ್ಲಿ ಮಠದ ಶ್ರೀ ಸದಾಶಿವ ಸ್ವಾಮೀಜಿಗಳು ಮಾತನಾಡಿ, ಕ್ಷೇತ್ರದ ಕಟ್ಟಕಡೆಯ ಗ್ರಾಮಗಳಾದ ಈ ಭಾಗಕ್ಕೆ ಶಾಸಕರು ಹೆಚ್ಚಿನ ಅನುದಾನ ಒದಗಿಸಿರುವುದು ಪ್ರಶಂಸನೀಯವಾಗಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದರೂ ಬಿಜೆಪಿ ಶಾಸಕನಾಗಿ ಸಿಮೆಂಟ್ ಮಂಜು ಅವರು ಉಳಿದ ಕ್ಷೇತ್ರಗಳಿಗಿಂತ ಹೆಚ್ಚು ಅನುದಾನ ತರುವಲ್ಲಿ ಶ್ರಮಿಸುತ್ತಿರುವುದು ಗಮನಾರ್ಹವಾಗಿದೆ ಎಂದು ಹೇಳಿದರು.

ಕ್ಷೇತ್ರದ ವಿಸ್ತೀರ್ಣ ಬಹಳ ದೊಡ್ಡದಾಗಿದ್ದರೂ ಸರ್ಕಾರದ ಭಾಗವಾಗದೆ ಅನುದಾನ ತರುತ್ತಿರುವ ಶಾಸಕರನ್ನು ಪಡೆದಿರುವುದು ಈ ಕ್ಷೇತ್ರದ ಜನರ ಭಾಗ್ಯವಾಗಿದೆ. ಕಳೆದ 2025 ವರ್ಷಗಳಿಂದ ರಸ್ತೆ ಸೌಲಭ್ಯ ಕಾಣದ ಗ್ರಾಮಗಳು ಇದೀಗ ಉತ್ತಮ ಗುಣಮಟ್ಟದ ರಸ್ತೆಗಳನ್ನು ಪಡೆಯುತ್ತಿವೆ. ಹಲವಾರು ಬಸ್ ನಿಲ್ದಾಣಗಳು ಹಾಗೂ ಸಿಮೆಂಟ್ ರಸ್ತೆ ನಿರ್ಮಾಣ ಕಾರ್ಯಗಳು ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಕ್ಷೇತ್ರವು ಸಮಗ್ರ ಅಭಿವೃದ್ಧಿ ಹೊಂದಲಿದೆ. ದೇವರು ಶಾಸಕರಿಗೆ ಮತ್ತಷ್ಟು ಶಕ್ತಿ ನೀಡಲಿ ಎಂದು ಅವರು ಆಶೀರ್ವದಿಸಿದರು.

ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಸದಸ್ಯರು, ಪಕ್ಷದ ಮುಖಂಡರು ಹಾಜರಿದ್ದರು.

# ಫೆ.1ರಂದು ಕೇಂದ್ರ ಆಯವ್ಯಯ ಮಂಡನೆ

• ಪ್ರಜೋದಯ ವರದಿ

**ನವದೆಹಲಿ:** ಬಹುನಿರೀಕ್ಷೆಯ ಕೇಂದ್ರ ಸರ್ಕಾರದ ಬಜೆಟ್-2026 ಮಂಡನೆಗೆ ದಿನಗಣನೆ ಆರಂಭವಾಗಿದೆ. ಈ ಕೇಂದ್ರ ಬಜೆಟ್ ಮೇಲೆ ಅಪಾರ ನಿರೀಕ್ಷೆಗಳು ಭಾರತೀಯರಲ್ಲಿವೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2026-27ನೇ ಸಾಲಿನ ಬಜೆಟ್ ಅನ್ನು ಫೆಬ್ರವರಿ 1ರಂದು ಮಂಡಿಸಲಿದ್ದಾರೆ.

ನಿರ್ಮಲಾ ಸೀತಾರಾಮನ್ ಅವರ ಮಂಡಿಸುತ್ತಿರುವ ಸತತ ಒಂಬತ್ತನೇ ಕೇಂದ್ರ ಬಜೆಟ್ ಇದಾಗಿದೆ. ಈ ಮೂಲಕ ಕೇಂದ್ರ ಸಚಿವೆ ಮತ್ತೊಂದು ದಾಖಲೆ ಬರೆಯಲಿದ್ದಾರೆ. ಕೇಂದ್ರ ಬಜೆಟ್ 2026 ಕುರಿತಂತೆ ಈಗಾಗಲೇ ತೆರಿಗೆದಾರರು ಮತ್ತು ಕೈಗಾರಿಕಾ ಮುಖಂಡರು ಹಲವು ಬೇಡಿಕೆಗಳನ್ನು ಸಲ್ಲಿಸಿದ್ದಾರೆ. ಹಲವು ನಿರೀಕ್ಷೆಗಳನ್ನು ಅವರು ಇಟ್ಟುಕೊಂಡಿದ್ದಾರೆ.

ವಿತ್ತ ಸಚಿವರು ಬಜೆಟ್‌ನಲ್ಲಿ ವಿವಿಧ ವಲಯಗಳಿಗೆ ಅನುದಾನ ಹಂಚಿಕೆ, ಹೊಸ ಯೋಜನೆ ಘೋಷಣೆ ಮಾಡುವ ಮೂಲಕ ಭಾರತದ ಬೆಳವಣಿಗೆಯತ್ತ ಗಮನ ಹರಿಸಲಿದ್ದಾರೆ.



ಜ.28 ರಂದು ಸಂಸತ್ತಿನಲ್ಲಿ ಬಜೆಟ್ ಅಧಿವೇಶನ ಪ್ರಾರಂಭವಾಗಲಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಎರಡೂ ಸದನಗಳನ್ನು ಉದ್ದೇಶಿಸಿ ಜಂಟಿ ಭಾಷಣ ಮಾಡಲಿದ್ದಾರೆ. ಜ.29ರಂದು ಲೋಕಸಭಾ ಸಚಿವಾಲಯ ಹೊರಡಿಸಿದ ತಾತ್ಕಾಲಿಕ ಕ್ಯಾಲೆಂಡರ್ ಪ್ರಕಾರ, ಈ ದಿನ ಸದನವೂ ಸಭೆ ನಡೆಯಲಿದ್ದು, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬೆಳಿಗ್ಗೆ 11 ಗಂಟೆಗೆ ಆರ್ಥಿಕ ಸಮೀಕ್ಷೆಯನ್ನು ಮಂಡಿಸಲಿದ್ದಾರೆ.

ಈ ವರ್ಷ ರೈಲ್ವೆ ವಲಯ, ದೇಶದ ಮೂಲಸೌಕರ್ಯ, ನಗರಾಭಿವೃದ್ಧಿ, ಉತ್ಪಾದನೆ, ಆಟೋ ಮೊಬೈಲ್, ರಕ್ಷಣೆ, ಎಲೆಕ್ಟ್ರಾನಿಕ್ಸ್, ಎಐ ತಂತ್ರಜ್ಞಾನ, ಎಂಎಸ್‌ಎಂಇ ಹಾಗೂ ನವೀಕರಿಸಬಹುದಾದ ಇಂಧನ ಕುರಿತು ಮಹತ್ವದ ಘೋಷಣೆ ನಿರೀಕ್ಷೆ ಇದೆ. ಈ ಕ್ಷೇತ್ರಗಳಿಗೆ ಬಜೆಟ್‌ನಲ್ಲಿ ಹೆಚ್ಚು ಸ್ಥಾನ ಸಿಗಬಹುದೆಂದು ಅಂದಾಜಿಸಲಾಗಿದೆ.

ಅದೇ ರೀತಿ ಆರೋಗ್ಯ, ರಕ್ಷಣೆ, ಪ್ರವಾಸೋದ್ಯಮ, ಕೃಷಿ ಮತ್ತು ಲಾಜಿಸ್ಟಿಕ್ಸ್‌ನಂತಹ ಇತರ ವಲಯಗಳು ಕೇಂದ್ರದಿಂದ ಒಂದಷ್ಟು ಹಂಚಿಕೆ ಪಡೆಯುವ ಸಂಭವವಿದೆ. 2025ರ ಬಜೆಟ್‌ನಲ್ಲಿ ಏನಾಗಿತ್ತು? ವರ್ಷದ ಹಿಂದೆ ಇದೇ ಅವಧಿಯಲ್ಲಿ ವಿತ್ತ ಸಚಿವರು ಕೇಂದ್ರ ಬಜೆಟ್ 2025 ಮಂಡಿಸಿದ್ದರು. 12 ಲಕ್ಷ ರೂ.ವರೆಗಿನ ಆದಾಯ ಗಳಿಸುವವರಿಗೆ ತೆರಿಗೆ ವಿನಾಯಿತಿ ನೀಡಿತ್ತು. ಇದು ತೆರಿಗೆದಾರರಿಗೆ ಕೊಟ್ಟ ದೊಡ್ಡ ಸಿಹಿ ಸುದ್ದಿಯಾಗಿತ್ತು. ಅಲ್ಲದೇ ಲಕ್ಷಾಂತರ ಮಧ್ಯಮ ವರ್ಗದ ಜನರಿಗೆ ಪೂರಕ ನಿರ್ಧಾರವೆಂದು ಪ್ರಶಂಸಿಸಲ್ಪಟ್ಟಿತ್ತು. ಹೊಸ ತೆರಿಗೆ ಪದ್ಧತಿಯಡಿ ತೆರಿಗೆ ರಹಿತ ಆದಾಯವು ಪ್ರಮಾಣಿತ ಕಡಿತದ ನಂತರ ₹12.75 ಲಕ್ಷಕ್ಕೆ ಏರಿತು. ಈ ಬಾರಿಯು ತೆರಿಗೆ ವಿಚಾರದಲ್ಲಿ ಏನೆಲ್ಲ ಘೋಷಣೆ ಆಗಲಿವೆ ಎಂದು ತೆರಿಗೆದಾರರು ಕಾಯುತ್ತಿದ್ದಾರೆ.

# ಬಂಟಿಂಗ್ಸ್, ಬ್ಯಾನರ್, ಫ್ಲೆಕ್ಸ್ ನಿಷೇಧ

• ಪ್ರಜೋದಯ ವರದಿ

**ಹಾಸನ:** ಆಲೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಪಟ್ಟಣ ಪಂಚಾಯಿತಿ ಅನುಮತಿ ಇಲ್ಲದೆ ಯಾವುದೇ ಬಂಟಿಂಗ್ಸ್, ಬ್ಯಾನರ್ ಫ್ಲೆಕ್ಸ್‌ಗಳನ್ನು ಹಾಕುವುದನ್ನು ನಿಷೇಧಿಸಲಾಗಿದ್ದು, ಯಾವುದೇ ಸರ್ಕಾರಿ ಕಛೇರಿಗಳ ಮುಂಭಾಗ ಬ್ಯಾನರ್ ಫ್ಲೆಕ್ಸ್ ಗಳನ್ನು ಹಾಕುವಂತಿಲ್ಲ, ಒಂದು ವೇಳೆ ಅನುಮತಿ ಇಲ್ಲದೆ ಹಾಗೂ ಸಂಬಂಧಪಟ್ಟ ಕ್ರಮವನ್ನು ತೆಗೆದು ಕೊಳ್ಳಲಾಗುವುದು ಎಚ್ಚರಿಕೆ ನೀಡಲಾಗಿದೆ.

ಯಾವುದೇ ಅಹಿರಕರ ಘಟನೆಗಳ ನಡೆದಲ್ಲಿ ಆಯೋಜಕರು ವಿರುದ್ಧ ಕಾನೂನಿನ ಕ್ರಮವನ್ನು ತೆಗೆದುಕೊಳ್ಳಲಾಗುವುದು. ಯಾವುದೇ ಅಹಿತಕರ ಘಟನೆ ನಡೆದಲ್ಲಿ ಆಯೋಜಕರು ವಿರುದ್ಧ ಕರ್ನಾಟಕ ಸಾರ್ವಜನಕ ಸ್ಥಳಗಳ ವಿರೂಪ ತಡೆ ಕಾಯಿದೆ-1981ರಡಿ ಅಪರಾಧಿಗಳ ವಿರುದ್ಧ ಕಠಿಣ ಕಾನೂನು ಕ್ರಮಕ್ಕೆ ಪೊಲೀಸ್ ಇಲಾಖೆಯಲ್ಲಿ ದೂರನ್ನು ದಾಖಲು ಮಾಡಲಾಗುವುದು ಎಂದು ಆಲೂರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಅವರು ತಿಳಿಸಿದ್ದಾರೆ.

## ಬೇಲೂರು ಪುರಸಭೆ ಪೂರ್ವಭಾವಿ ಸಭೆ

ಬೇಲೂರು: ಪುರಸಭೆಯಿಂದ 2026-27ನೇ ಆಯವ್ಯಯ ತಯಾರಿಯ ಮೊದಲನೆ ಸುತ್ತಿನ ಪೂರ್ವಭಾವಿ ಸಭೆಯನ್ನು ಫೆ.2 ರಂದು ಬೆಳಿಗ್ಗೆ 11 ಗಂಟೆಗೆ ಪುರಸಭೆಯ ಕಚೇರಿಯ ಆವರಣದಲ್ಲಿ ಪ್ರಭಾರ ಅಧ್ಯಕ್ಷರ ಬಿ.ಎಸ್.ಉಷಾ ಸತೀಶ್ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ನಾಳೆ ವಿದ್ಯುತ್ ವ್ಯತ್ಯಯ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವತಿಯಿಂದ 66/11 ಕೆ.ವಿ. ರಾಮೇಶ್ವರನಗರ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಹಮ್ಮಿಕೊಂಡಿರುವುದರಿಂದ ಕೆ.ಆರ್. ಪುರಂ, ಉದಯಗಿರಿ, ರಿಂಗ್ ರೋಡ್, ಬೂವನಹಳ್ಳಿ, ಸತ್ಯಮಂಗಲ, ಶಂಕರಿಪುರಂ, ದೊಡ್ಡಪುರ, ಸಿರಿ ಕಲ್ಚರ್, ಕಾಟೀಹಳ್ಳಿ, ಎಸ್.ಎಂ. ಕೃಷ್ಣ ನಗರ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ಜ.29ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಸಾರ್ವಜನಿಕರು ಸಹಕರಿಸುವಂತೆ ಕಾರ್ಯಾಚರಣೆಗಳ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದೂ ಸಮಾಜೋತ್ಸವ: ಜಾಗೃತಿ ಮೂಡಿಸುವ ಉದ್ದೇಶ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ದೇಶದ ಹಿಂದೂಗಳ ಜಾಗೃತಿಗಾಗಿ ಹಾಗೂ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಮಾನೋತ್ಸವ ಆಚರಣೆಯ ಅಂಗವಾಗಿ ತಾಲ್ಲೂಕು ಹಿಂದೂ ಸಮಾಜೋತ್ಸವ ಆಯೋಜನಾ ಸಮಿತಿಯ ವತಿಯಿಂದ ಫೆ.1 ರಂದು ಹಿಂದೂ ಸಮಾಜೋತ್ಸವ ಸಭಾ ಕಾರ್ಯಕ್ರಮ ಮತ್ತು ಶೋಭಾಯಾತ್ರೆಯನ್ನು ಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ತಾಲ್ಲೂಕು ಸಮಿತಿ ಅಧ್ಯಕ್ಷ ಶಿವಶಂಕರ್ ಅವರು ಹೇಳಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶ ಪ್ರೇಮ, ಸನಾತನ ಪರಂಪರೆ ಹಾಗೂ ಭಾರತೀಯತೆಯ ಅಸ್ಮಿತೆಗಳನ್ನು



ಉಳಿಸಿ ಬೆಳಸುವ ಧ್ಯೇಯದಿಂದ ಪ್ರಾರಂಭಗೊಂಡ ಈ ಸಂಘಟನೆಗೆ ಈಗ ನೂರು ವರ್ಷಗಳು ಕಳೆದಿದೆ. ಪ್ರಸಕ್ತ ಸಂದರ್ಭದ ಹಾಗೂ ಮುಂದಿನ ತಲೆಮಾರಿನ ಸುರಕ್ಷತೆ ಹಾಗೂ ನೆಮ್ಮದಿಯ ಬಾಳಿಗಾಗಿ ಹಿಂದೂಗಳಲ್ಲಿ ಸಂಘಟನೆಯ ಜಾಗೃತಿ ಮೂಡಿಸುವ ಉದ್ದೇಶದಿಂದ ಅಂದು ಬೆಳಗ್ಗೆ 9 ಗಂಟೆಗೆ 40 ಅಡಿ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಗೋಪೂಜೆ, ಸಪ್ತ ನದಿಗಳ ತೀರ್ಥ ವಿತರಣೆ ನಂತರ ಶ್ರೀರಾಮತಾರಕ ಹೋಮ ಮಧ್ಯಾಹ್ನ 12 ಗಂಟೆಗೆ ಮಹಾಮಂಗಳಾರತಿ ಪ್ರಸಾದ ವಿನಿಯೋಗ ನೆರವೇರಲಿದೆ ಎಂದು ತಿಳಿಸಿದರು.

ಹಿಂದೂ ಧರ್ಮದ ಉಳಿವು, ಮೌಲ್ಯತೆಯ ಜಾಗೃತಿ ಹೆಚ್ಚಿಸುವ ಸಲುವಾಗಿ ಸಮಾಜೋತ್ಸ ವ ಆಯೋಜಿಸಲಾಗಿದೆ. ಮಧ್ಯಾಹ್ನ 3 ಗಂಟೆಗೆ ಸಮಾಜೋತ್ಸವ ಕಾರ್ಯಕ್ರಮದ ಅಂಗವಾಗಿ 40 ಅಡಿ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಶೋಭಯಾತ್ರೆ ಆರಂಭವಾಗಿ ಕೃಷ್ಣರಾಜೇಂದ್ರ ವೃತ್ತ, ನವೋದಯ ಶಾಲೆ ವೃತ್ತದ ಮುಖಾಂತರ ಮೈಸೂರು ರಸ್ತೆಯಲ್ಲಿ ಸಾಗಿ ಆಸ್ಪತ್ರೆ ವೃತ್ತದ ಮಾರ್ಗವಾಗಿ ಸರ್ಕಾರಿ ಮಾಧ್ಯಮಿಕ ಶಾಲಾ ಆವರಣದಲ್ಲಿ ಮೆರವಣಿಗೆಯು ಅಂತ್ಯಗೊಳ್ಳಲಿದೆ ಎಂದು ಅವರು ಮಾಹಿತಿ ನೀಡಿದರು.

ಈ ಶೋಭಾಯಾತ್ರೆಯ ಬಳಿಕ ಮಾಧ್ಯಮಿಕ ಶಾಲಾ ಆವರಣದಲ್ಲಿ ಸಭಾ ಕಾರ್ಯಕ್ರಮ ನಡೆಯಲಿದ್ದು, ಪುರವರ್ಗ ಹಿರೇಮಠದ ಡಾ. ಮಹೇಶ್ವರ ಶಿವಾಚಾರ್ಯ ಸ್ವಾಮೀಜಿಯವರು ದಿವ್ಯ ಸಾನಿಧ್ಯ ಮತ್ತು ಆಶೀರ್ವಚನ ನೀಡಲಿದ್ದಾರೆ. ತಾಲ್ಲೂಕಿನ ವಿವಿಧ ಹಿಂದೂಪರ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದು, ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ದಕ್ಷಿಣ ಪ್ರಾಂತ ಬೌದ್ಧಿಕ್ ಪ್ರಮುಖ್ ಗೋವಿಂದ ಜೀ ರವರು ದಿಕ್ಸೂಚಿ ಭಾಷಣ ಮಾಡಲಿದ್ದಾರೆ. ಸಮಾಜೋತ್ಸವದ ಸಭಾ ಕಾರ್ಯಕ್ರಮದಲ್ಲಿ 2500ಕ್ಕೂ ಹೆಚ್ಚು ಜನ ಭಾಗವಹಿಸುವ ನಿರೀಕ್ಷೆಯಿದೆ. ಹೆಚ್ಚಿನ ಸಂಖ್ಯೆಯಲ್ಲಿ ಹಿಂದೂ ಧರ್ಮಿಯರು ಭಾಗವಹಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಆರ್‌ಎಸ್‌ಎಸ್ ಮುಖಂಡ ಸಿ.ಎಸ್. ಮನೋಹರ್, ಹಿಂದೂ ಸಮಾಜೋತ್ಸವ ಸ್ಥಾಯಿ ಸಮಿತಿಯ ಸಹ ಸಂಯೋಜಕ ಸಿ.ಎಂ.ರೂಪ ಮನೋಹರ್, ಸಮಿತಿ ಸದಸ್ಯರಾದ ಜಾನಕಿ ರವೀಂದ್ರ ಕುಮಾರ್, ರೂಪ ಸಂತೋಷ್, ಡಾ. ಶೇಷಶಯನ, ಮೋಹನ್, ಆನಂದ್ ಭಾಗವಹಿಸಿದ್ದರು.

# ಯಾವುದೇ ಕೆಲಸವಾದರೂ ಕರ್ತವ್ಯ ನಿಷ್ಠೆ ಹೊಂದಿರಬೇಕು

## ವಿದ್ಯಾರ್ಥಿಗಳಿಗೆ ಜೀವನದ ಪಾಠ ಕಲಿಸಿ: ವಾರ್ಡನ್‌ಗಳಿಗೆ ಡಿ.ಸಿ. ಕರೆ

• ಪ್ರಜೋದಯ ವರದಿ

**ಹಾಸನ:** ವಸತಿ ನಿಲಯದಲ್ಲಿರುವ ವಿದ್ಯಾರ್ಥಿಗಳು ತಂದೆ ತಾಯಿಗಳಿಂದ ದೂರವಿರುತ್ತಾರೆ, ನೂರಾರು ವಿದ್ಯಾರ್ಥಿಗಳು ಭವಿಷ್ಯವನ್ನು ರೂಪಿಸುವ ಅವಕಾಶ ವಾರ್ಡನ್‌ಗಳ ಕೈಯಲ್ಲಿರುತ್ತದೆ. ಪ್ರತಿಯೊಂದು ವಿದ್ಯಾರ್ಥಿಗಳಿಗೆ ಪೋಷಕರಾಗಿ ಜೀವನದ ಪಾಠ ಕಲಿಸಿಬೇಕು ಎಂದು ಜಿಲ್ಲಾಧಿಕಾರಿ ಕೆ. ಎಸ್.ಲತಾಕುಮಾರಿ ತಿಳಿಸಿದ್ದಾರೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಮಂಗಳವಾರ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆಯಿಂದ ನಿಲಯ ಪಾಲಕರಿಗೆ/ ನಿಲಯ ಮೇಲ್ವಿಚಾರಕರಿಗೆ ಜೀವನದ ಕೌಶಲ್ಯಗಳು ಹಾಗೂ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಹಾಗೂ ಬೆಂಬಲ ಸೇವೆಗಳ ಕುರಿತ ಆಯೋಜಿಸಿದ್ದ ಕಾರ್ಯಾಗಾರ ಆಯೋಜಿಸಿ ಅವರು ಮಾತನಾಡಿದರು.

ಯಾವುದೇ ಕೆಲಸವಾದರೂ ಸಹ ಕರ್ತವ್ಯ ನಿಷ್ಠೆ ಇರಬೇಕು, ಆಸಕ್ತಿ ಇದ್ದರೆ ಯಾವುದೇ ಕೆಲಸವಾಗಲಿ ಮಾಡಿ ಸಾಧಿಸಬಹುದು. ಮಕ್ಕಳನ್ನು ಗೌರವ, ಪ್ರೀತಿಯಿಂದ ಮಾತನಾಡಿಸಿ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸಬೇಕು ಎಂದರಲ್ಲದೆ, ವಸತಿ ನಿಲಯದಲ್ಲಿ ನೂರು ವಿದ್ಯಾರ್ಥಿಗಳಿದ್ದರೆ ನೂರು ಸಮಸ್ಯೆಗಳಿರುತ್ತವೆ. ತಾಳ್ಮೆಯಿಂದ ಗೌರವದಿಂದ ಆಲಿಸಿ ಅರ್ಥ ಮಾಡಿಕೊಂಡು ಪರಿಹಾರ ನೀಡುವ ಕೆಲಸ ಮಾಡಬೇಕು, ಮಕ್ಕಳ ಸುರಕ್ಷತೆಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ನಿಲಯದಲ್ಲಿ ಸ್ವಚ್ಛತೆ ಇಲ್ಲದಿದ್ದರೆ ವಿದ್ಯಾರ್ಥಿ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ, ಎಲ್ಲಾ ವಿದ್ಯಾರ್ಥಿ




ನಿಲಯದಲ್ಲಿ ಕಡ್ಡಾಯವಾಗಿ ಸ್ವಚ್ಛತೆ ಕಾಪಾಡಿಕೊಳ್ಳವುದು ನಿಲಯ ಪಾಲಕರು ಕರ್ತವ್ಯ, ಸ್ವಚ್ಛತೆಗೆ ಮೊದಲ ಆದ್ಯತೆಯಾಗಬೇಕು ಎಂದು ತಿಳಿಸಿದರು.

ಮಕ್ಕಳ ಆಲೋಚನೆಗಳನ್ನು ಅರ್ಥೈಸಿಕೊಂಡು ಅವರಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸುವ ಹಾಗೂ ಪ್ರೋತ್ಸಾಹಿಸುವ ಕೆಲಸವಾಗಬೇಕು, ಅಡಿಗೆ ಸಿಬ್ಬಂದಿಗಳು ಕಡ್ಡಾಯವಾಗಿ ಸಮವಸ್ತ್ರ ಧರಿಸಿಯೇ ಅಡುಗೆ ತಯಾರಿಸಬೇಕು. ಪ್ರತಿಯೊಂದು ಹಾಸ್ಟೇಲ್‌ಗಳಲ್ಲಿ ವಿದ್ಯಾರ್ಥಿಗಳ ಆರೋಗ್ಯ ಕಡ್ಡಾಯವಾಗಿ ತಪಾಸಣೆ ಮಾಡಿಸಬೇಕು, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುಕೂಲವಾಗಲು ತರಬೇತಿ ನೀಡಬೇಕು, ಕೌಶಲ್ಯ ಬಳಸಿಕೊಳ್ಳಲು ತರಬೇತಿ ಸ್ವಂತ ಉದ್ಯೋಗ ಮಾಡಲು ಸಲಹೆ ನೀಡಬೇಕು ಎಂದರು.

ಪೋಕ್ಸೋ ಕಾಯ್ದೆಯ ನಿಯಮಗಳ ಬಗ್ಗೆ ಪ್ರತಿಯೊಂದು ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಅರಿವು ಮೂಡಿಸಬೇಕು. ವಿದ್ಯಾರ್ಥಿ ನಿಲಯದ ಆವರಣದಲ್ಲಿ ಗಿಡ ಮರಗಳನ್ನು ಬೆಳೆಸುವ ಮೂಲಕ ಆರೋಗ್ಯಕರ ವಾತಾವರಣ ನಿರ್ಮಾಣ ಮಾಡಬೇಕು ಎಂದು ತಿಳಿಸಿದರು.

ಪ್ರತಿಯೊಂದು ವಿದ್ಯಾರ್ಥಿ ನಿಲಯದಲ್ಲಿ ಗ್ರಂಥಾಲಯ ಇರಬೇಕು, ಗ್ರಂಥಾಲಯದಲ್ಲಿ ವಿದ್ಯಾಭ್ಯಾಸ ಪೂರಕ ಪುಸ್ತಕಗಳು, ಸ್ಪರ್ಧಾತ್ಮಕ ಪರೀಕ್ಷೆಯ ಪುಸ್ತಕಗಳು, ದಿನಪತ್ರಿಕೆಗಳು ಇರಬೇಕು ಎಂದು ತಿಳಿಸಿದರು.

ಜಿ.ಪಂ. ಸಿಇಒ ಪೂರ್ಣಿಮಾ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕುಮಾರ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಆಧುನಿಕತೆಗೆ ಅನುಗುಣವಾಗಿ ಕುಲಕಸುಬು ನಡೆಸಿ

• ಪ್ರಜೋದಯ ವರದಿ

**ಅರಸೀಕೆರೆ:** ಸವಿತಾ ಸಮಾಜ ಬಂಧುಗಳು ನಾಗರಿಕ ಸಮಾಜದ ನಾವಿಕರಿದ್ದಂತೆ ಎಂದು ತಾಲೂಕು ದಂಡಾಧಿಕಾರಿಗಳಾದ ಸಂತೋಷ ಕುಮಾರ್ ಹೇಳಿದರು.

ತಾಲ್ಲೂಕು ಆಡಳಿತ ಹಾಗೂ ತಾಲ್ಲೂಕು ಸವಿತಾ ಸಮಾಜದ ಸಂಯುಕ್ತಾಶಯದಲ್ಲಿ ತಾಲ್ಲೂಕು ಕಚೇರಿಯ ಸಭಾಂಗಣದಲ್ಲಿ ಆಯೋಜಿಸಿದ್ದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಧುನಿಕತೆಗೆ ಅನುಗುಣವಾಗಿ ತಮ್ಮ ಕುಲ ಕಸುಬನ್ನು ಸವಿತಾ ಸಮಾಜದ ಬಾಂಧವರು ಮುಂದುವರಿಸುವ ಜೊತೆಗೆ ಆರ್ಥಿಕವಾಗಿಯೂ ಸದೃಢರಾಗುವಂತೆ ಅವರು ಕಿವಿ ಮಾತು ಹೇಳಿದರು.

ತಾಲ್ಲೂಕು ಸವಿತಾ ಸಮಾಜದ ಅಧ್ಯಕ್ಷ ಅರುಣ್‌ಕುಮಾರ್ ಅವರು



ಮಾತನಾಡಿ, ಸಂಘದ ಚಟುವಟಿಕೆಗಳಲ್ಲಿ ಸಮಾಜ ಬಾಂಧವರು ಪಾಲ್ಗೊಳ್ಳುವ ಮನಸ್ಥಿತಿ ಬೆಳೆಸಿಕೊಳ್ಳಬೇಕು. ಸಂಘಟಿತ ಮನೋಭಾವದಿಂದ ಮಾತ್ರ ಸರ್ಕಾರದ ಸವಲತ್ತುಗಳನ್ನು ನಾವು ಪಡೆಯಲು ಸಾಧ್ಯವಾಗಲಿದೆ ಎಂದು ಕರೆ ನೀಡಿದರು.

ವಿದ್ಯುತ್ ಸಲಹಾ ಸಮಿತಿಯ ನಾಮನಿರ್ದೇಶಿತ ಸದಸ್ಯ ವಿಜಯ್ ಕುಮಾರ್ ಮಾತನಾಡಿ, ಸಾಕ್ಷಾತ್ ಶಿವನ ಆಜ್ಞಾನುಸಾರ ಸವಿತಾ ಸಮಾಜವು ಕ್ಷೌರಿಕ, ಶುಭ ಸಮಾರಂಭಗಳಲ್ಲಿ ಮಂಗಳವಾದ್ಯ, ನಾಟಿ ವೈದ್ಯ ಪದ್ಧತಿಯನ್ನು ಮುಂದುವರಿಸುತ್ತಾ ಸಮಾಜ ಸೇವೆಯಲ್ಲಿ ತೊಡಗಿದೆ ಆದರೆ ಸಣ್ಣ ಸಮಾಜವಾಗಿರುವ ನಮಗೆ ಸರ್ಕಾರದಿಂದ ನ್ಯಾಯವಾಗಿ ದೊರೆಯಬೇಕಾದ ಸೌಲತ್ತುಗಳು ಇಂದಿಗೂ ಮರೀಚಿಕೆಯಾಗಿರುವುದು ವಿಷಾದದ ಸಂಗತಿ ಎಂದರು.

ಸಮಾರಂಭದಲ್ಲಿ ಸವಿತಾ ಸಮಾಜದ ಉಪಾಧ್ಯಕ್ಷ ಷಣ್ಮುಗಂ, ರಾಜಮಾಣಿ, ಕಾರ್ಯದರ್ಶಿ ವಿ.ರಾಜು, ಖಜಾಂಚಿ ಧರ್ಮಣ್ಣ, ಶ್ರೀನಿವಾಸ್, ನಾಗರಾಜ್, ನಾರಾಯಣ್, ರಾಜು, ಜಗನ್, ಸೋನು ಉಪಸ್ಥಿತರಿದ್ದರು.

# ಸುಶಿಕ್ಷಿತರು ದೇಶದ ಮುಖವಾಣಿ ಇದ್ದಂತೆ

• ಪ್ರಜೋದಯ ವರದಿ

**ಹಾಸನ:** ಸುಶಿಕ್ಷಿತರು ದೇಶದ ಮುಖವಾಣಿ ಇದ್ದಂತೆ ಎಂದು ವಿಶ್ವ ಮಾನವ ಹಕ್ಕುಗಳ ರಕ್ಷಣಾ ಆಯೋಗದ ವಿಶ್ವಸ್ಥ ಮಂಡಳಿ ನವದೆಹಲಿಯ ಸದಸ್ಯ ನಾಡಶ್ರೀ ಬಾ.ನಂ. ಲೋಕೇಶ ಅಭಿಪ್ರಾಯಪಟ್ಟರು.

ಶ್ರೀಕಂಠ ಪುರ ಅಂಚೆಪಾಳ್ಯದ ಕ್ರಿಕೆಟ್ ಕ್ರೀಡಾಗಣದಲ್ಲಿ ಟಿನಿ ಹಾರ್ಟ್ಸ್ ಶಾಲೆಯಲ್ಲಿ ಆಯೋಜಿಸಿದ್ದ 2025-26ನೇ ಸಾಲಿನ ಹರ್ಷೋತ್ಸವ-4 ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನ್ನಾಡುತ್ತ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಟಿನಿ ಹಾರ್ಟ್ಸ್ ವಿದ್ಯಾಸಂಸ್ಥೆಯಲ್ಲಿ ಕೇವಲ ಪುಸ್ತಕದ ಜ್ಞಾನವನ್ನು ಪಡಿಮೂಡಿಸುವುದಕ್ಕೆ ಸೀಮಿತವಾಗದೆ ಸಾಹಿತ್ಯ, ಸಂಸ್ಕೃತಿ, ಸಂಗೀತ, ಕಲೆ ಹಾಗೂ ಕ್ರೀಡೆಗೆ



ಉತ್ತೇಜನ ಕೊಡುತ್ತಿರುವುದರಿಂದ ವಿದ್ಯಾರ್ಥಿಗಳ ಸರ್ವಾಗೀಣ ಪ್ರಗತಿ ಸಾಧ್ಯವಾಗುತ್ತಿದೆ. ಇಂತಹ ವಿದ್ಯಾ ಸಂಸ್ಥೆಯಲ್ಲಿ ಕಲಿತ ಮಗು ಉತ್ತಮ ಭವಿಷ್ಯ ಕಟ್ಟಿಕೊಳ್ಳುತ್ತದೆ ಎಂದರು.

ಡಾ.ಆದರ್ಶ ಮಾತನಾಡಿ, ಪೋಷಕರು ಶಾಲೆಯೊಂದಿಗೆ ಸದಾಕಾಲ ಒಡನಾಟ ಇಟ್ಟುಕೊಂಡಿದ್ದರೆ ಮಗುವಿನ ಬೆಳವಣಿಗೆ ಹಾಗೂ ಅಭಿವೃದ್ಧಿ ಗೆ ನಾಂದಿ ಹಾಡಿದಂತೆ. ಮಗುವಿನ ಕಲಿಕೆ ಕೇವಲ ಶಾಲೆಗೆ ಸೀಮಿತಗೊಳಿಸದೇ ಮನೆಯಲ್ಲಿ ಔಪಚಾರಿಕ ತಿಳುವಳಿಕೆ ನೀಡಬೇಕು ಎಂದು ನುಡಿದರು.

ಉಪನ್ಯಾಸಕಿ ಹಾಗೂ ಲೇಖಕಿ ಸೌಮ್ಯಶ್ರೀ ಮಾತನಾಡಿ, ಮಗುವಿನ ಮನೋ ವಿಕಾಸ ಹಂತ ಹಂತವಾಗಿ ಆಗುತ್ತಾ ಹೋಗುತ್ತದೆ. ಈ ಕ್ರಿಯೆ ನಡೆಯುವ ಸಂದರ್ಭದಲ್ಲಿ ಪೋಷಕರು ಮಗುವಿನ ಮನಸ್ಸಿ ನ ಮೇಲೆ ಒತ್ತಡ ಹಾಕದೆ ನಾಜುಕಾಗಿ ನಡೆದುಕೊಳ್ಳಬೇಕು ಎಂದು ಹೇಳಿದರು.

ಶಾಲೆಯ ಕಾರ್ಯದರ್ಶಿ ಭವ್ಯ ಮಾತನಾಡಿ, ನಮ್ಮ ಶಾಲೆಯ ಬೆಳವಣಿಗೆ ಕಾಲದಲ್ಲಿ ಹಲವಾರು ಏಳು ಬೀಳುಗಳನ್ನು ಕಂಡಿದ್ದೇವೆ. ನಮ್ಮ ಶಾಲೆಯ ಮಕ್ಕಳೇ ನಮ್ಮ ಸಂಸ್ಥೆಯ ಆಸ್ತಿ. ಸುಂದರ ತೋಟದಲ್ಲಿ ಇರುವ ಸುಗಂಧ ಪರಿಮಳ ಬೀರುವ ಪುಷ್ಪಗಳಂತೆ. ಈ ಪುಷ್ಪಗಳು ಮುದುಡದ ಹಾಗೆ ನೋಡಿಕೊಳ್ಳುವೆವು ಎಂದು ತಿಳಿಸಿದರು.

ಸ್ಪರ್ಧೆಯಲ್ಲಿ ಜಯ ಗಳಿಸಿದ ಪೋಷಕರಿಗೆ, ಮಕ್ಕಳಿಗೆ ಬಹುಮಾನ ಕೊಟ್ಟು ಸನ್ಮಾನಿಸಲಾಯಿತು.

ಭವ್ಯ, ರತೀಶ್ ಬಿ.ಸಿ.ಪವಿತ್ರ, ಗಿರೀಶ್, ಹರೀಶ್, ಪುರುಷೋತ್ತಮ್, ಶ್ರೀನಿವಾಸ, ಮುಖೇಶ್ ಇನ್ನಿತರರು ಉಪಸ್ಥಿತರಿದ್ದರು.

# ಅರೇಹಳ್ಳಿಯಲ್ಲಿ ಭೀಮಾ ಕೋರೆಗಾಂವ್ ವಿಜಯೋತ್ಸವ

• ಪ್ರಜೋದಯ ವರದಿ

**ಬೇಲೂರು:** ಭೀಮಾ ಕೋರೆಗಾಂವ್ ಕೇವಲ ಯುದ್ಧವಲ್ಲ ತುಳಿತಕ್ಕೆ ಒಳಗಾದ ಅಸ್ಪೃಶ್ಯ ಸಮುದಾಯದ ಮೇಲಿನ ದೌರ್ಜನ್ಯದ ವಿರುದ್ಧದ ನಡೆದ ಕ್ರಾಂತಿಕಾರಿ ಹೋರಾಟವಾಗಿದೆ ಎಂದು ದಲಿತ ನಾಯಕ ಹಾಗೂ ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತ ಶ್ರೀಧರ್ ಕಲಿವೀರ್ ತಿಳಿಸಿದರು.

ಅರೇಹಳ್ಳಿ ಭೀಮಾ ಕೊರೆಗಾಂವ್ ವಿಜಯೋತ್ಸವ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ ಭೀಮಾ ಕೋರೆಗಾಂವ್ ವಿಜಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಯಾವುದೇ ಸಮುದಾಯದ ಮೇಲೆ ದಬ್ಬಾಳಿಕೆ ದೌರ್ಜನ್ಯ ಅತಿರೇಕಕ್ಕೆ ತಿರುಗಿದಾಗ ಅದರ ಪರಿಣಾಮ ಎಷ್ಟು ಕಠೋರವಾಗಿ ಇರುತ್ತದೆ ಎಂಬುದಕ್ಕೆ ಈ ಯುದ್ಧ ಸಾಕ್ಷಿಯಾಗಿದೆ ಎಂದರು.



ಇಂತಹ ಐತಿಹಾಸಿಕ ಯುದ್ಧದ ಬಗ್ಗೆ ಮಾಹಿತಿಯೇ ಇಲ್ಲದ ಸಂದರ್ಭದಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ ಅದನ್ನು ಪತ್ತೆ ಹಚ್ಚಿದ ಹಿನ್ನೆಲೆ ಇಂದು ಈ ಕಾರ್ಯಕ್ರಮ ಆಯೋಜನೆಗೊಂಡಿದೆ. ಆದರೆ ಇಂದಿಗೂ ಬಡವರ, ತುಳಿತಕ್ಕೆ ಒಳಗಾದವರ ಮೇಲೆ ಹಲ್ಲೆ ದೌರ್ಜನ್ಯಗಳು ನಿಂತಿಲ್ಲ, ಅಂಬೇಡ್ಕರ್ ಬರೆದಿರುವ ಸಂವಿಧಾನದ ಅಡಿಯಲ್ಲಿ ಸಮಾನತೆ ಕಟ್ಟುನಿಟ್ಟಿನ ಅನುಷ್ಠಾನವಾಗಬೇಕು ಎಂದು ಹೇಳಿದರು.

ಲಂಡನ್ ದುಂಡುಮೇಜಿನ ಸಮ್ಮೇಳನದಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ ಸಮಾನತೆಗಾಗಿ ಮಾತನಾಡಿದ ಭಾಷಣ ಶ್ಲಾಘನೀಯ. ಆದರೆ ಇಂದಿಗೂ ಸಮ ಸಮಾಜ ನಿರ್ಮಾಣ ಸಾಧ್ಯವಾಗದೆ ಇರುವುದು ವಿಪರ್ಯಾಸ. ತಮ್ಮ ಹಕ್ಕುಗಳನ್ನು ಪಡೆಯಲು ಹಿಂದುಳಿದ ಸಮುದಾಯಗಳ ಎಲ್ಲರೂ ಮುಂದಾಗಬೇಕು, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹಾದಿಯಲ್ಲಿ ನಡೆಯುವ ಮೂಲಕ ಸಂವಿಧಾನ ರಕ್ಷಣೆಗೆ ಒಕ್ಕೊರಲಿನಿಂದ ಒಗ್ಗೂಡಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದಲ್ಲಿ ವಿವಿಧ ಕಲಾತಂಡಗಳೊಂದಿಗೆ ಭೀಮಾ ಕೋರೆಗಾಂವ್ ವಿಜಯ ಸ್ತಂಬ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರ ಹಾಗೂ ಭೀಮಾ ಕೋರೆಗಾಂವ್ ಯುದ್ಧದ ನಾಯಕ ಸಿದ್ದನಾಕ ಅವರ ಭಾವಚಿತ್ರಗಳ ಜೊತೆ ನಡೆದ ಮೆರವಣಿಗೆಯಲ್ಲಿ ಸಾವಿರಾರು ಸಂಖ್ಯೆಯ ಸಮುದಾಯದ ಜನರು ಭಾಗವಹಿಸಿ ಡಿಜೆ ಶಬ್ದಕ್ಕೆ ಕುಣಿದು ಕುಪ್ಪಳಿಸಿದರು.

ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಸೇವಾ ಸಮಿತಿಯ ಅಧ್ಯಕ್ಷ ಸಂದೇಶ್, ಅರೇಹಳ್ಳಿ ಭೀಮಾ ಭೀಮಾ ಕೋರೆಗಾಂವ್ ವಿಜಯೋತ್ಸವ ಸಮಿತಿಯ ಅಧ್ಯಕ್ಷ ವಿರುಪಾಕ್ಷ, ಉಪಾಧ್ಯಕ್ಷ ಮಲ್ಲಿಕಾರ್ಜುನ್, ಕಾರ್ಯದರ್ಶಿ ಕುಮಾರ್, ದಿನೇಶ್, ಖಜಾಂಚಿ ಅನುಗಟ್ಟ ಕುಮಾರ್, ತಮ್ಮಣ್ಣ ಇನ್ನಿತರರು ಉಪಸ್ಥಿತರಿದ್ದರು

# ನಾಳೆ ಹೆತ್ತೂರಿನಲ್ಲಿ ಹಿಂದೂ ಸಮಾಜೋತ್ಸವ

## ಶ್ರೀ ಸತ್ಯಮಲ್ಲೇಶ್ವರಸ್ವಾಮಿ ದೇವಸ್ಥಾನದಿಂದ ಶೋಭಾಯಾತ್ರೆ

• ಪ್ರಜೋದಯ ವರದಿ

**ಸಕಲೇಶಪುರ:** ಹಿಂದೂ ಸಮಾಜೋತ್ಸವವನ್ನು ಹೆತ್ತೂರು, ಕುರಭತ್ತೂರು ಹಾಗೂ ವಳಲಹಳ್ಳಿ ಪಂಚಾಯತ್ ವ್ಯಾಪ್ತಿಯಲ್ಲಿ ಜ.29ರಂದು ವಿಜೃಂಭಣೆಯಿಂದ ಆಯೋಜಿಸಲಾಗುತ್ತಿದೆ ಎಂದು ವಿಶ್ವ ಹಿಂದೂ ಪರಿಷತ್ ಜಿಲ್ಲಾ ಕಾರ್ಯದರ್ಶಿ ಕರಡಿಗಾಲ ಹರೀಶ್ ಅವರು ತಿಳಿಸಿದರು.

ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜನವರಿ 29 ರಂದು ಗುರುವಾರ ಮಧ್ಯಾಹ್ನ 3 ಗಂಟೆಗೆ ಹೆತ್ತೂರು ಗ್ರಾಮದ ಶ್ರೀ ಸತ್ಯಮಲ್ಲೇಶ್ವರಸ್ವಾಮಿ ದೇವಸ್ಥಾನ ಆವರಣದಿಂದ ಬೃಹತ್ ಶೋಭಾಯಾತ್ರೆ ಏರ್ಪಡಿಸಲಾಗಿದ್ದು, ಇದು ನಗರದ ಪ್ರಮುಖ ಬೀದಿಗಳ ಮೂಲಕ ಸಾಗಲಿದೆ ಎಂದು ಮಾಹಿತಿ ನೀಡಿದರು.

ಸಂಜೆ 4.30ರಿಂದ ಹೆತ್ತೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಸಭಾ ಕಾರ್ಯಕ್ರಮ ನಡೆಯಲಿದ್ದು, ಹೆಗ್ಗಡಹಳ್ಳಿ ಶ್ರೀಮಠದ ಚಂಗಡಹಳ್ಳಿಯ ಶ್ರೀ ಷಡ್ಡಾವರಹಿತೇಶ್ವರ ಶಿವಾಚಾರ್ಯ ಮಹಾಸ್ವಾಮೀಜಿಗಳು ಆಶೀರ್ವಚನ ನೀಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜ್ಞಾನಸಮೃದ್ಧಿ ಟ್ರಸ್ಟ್‌ನ ಪ್ರವರ್ತಕ ಕಾಮನಹಳ್ಳಿ ತೀರ್ಥಾನಂದ ವಹಿಸಲಿದ್ದಾರೆ ಎಂದು ಹೇಳಿದರು.




ಸಭಾ ಕಾರ್ಯಕ್ರಮದಲ್ಲಿ ಶಾಸಕ ಸಿಮೆಂಟ್ ಮಂಜು, ಹೆತ್ತೂರಿನ ಶೃತಿ ಮೆಡಿಕಲ್‌ನ ಹೆಚ್.ಪಿ.ಸತೀಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಹಿಂದೂ ಜಾಗರಣ ವೇದಿಕೆಯ ಪ್ರಾಂತ ಕಾರ್ಯಕಾರಣಿ ಸದಸ್ಯ ಉಲ್ಲಾಸ್ ಕೆ.ಟಿ. ಅವರು ಮುಖ್ಯ ಭಾಷಣ ಮಾಡಲಿದ್ದಾರೆ ಎಂದು ವಿವರಿಸಿದರು.

ಹಿಂದೂ ಸಮಾಜೋತ್ಸವ ಆಯೋಜನ ಸಮಿತಿಯ ಅಧ್ಯಕ್ಷ ಉದ್ಯಮಿ ಪ್ರತಾಪ್, ಉಪಾಧ್ಯಕ್ಷ ಸುಮಂತ್, ಕಾರ್ಯದರ್ಶಿ ನೇತ್ರಾ ಸುರೇಶ್, ವಳಲಹಳ್ಳಿಯ ಕಾರ್ಯದರ್ಶಿ ಸುದರ್ಶನ್ ಹೆಚ್.ಆರ್. ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿರಲಿದ್ದಾರೆ ಎಂದು ತಿಳಿಸಿದರು.

ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಪ್ರತಿ ಮನೆಯ ಹಿರಿಯರು, ಮಾತೃಶಕ್ತಿ, ಮಕ್ಕಳು, ಯುವಕರು ಹಾಗೂ ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಕೆ.ಬಿ.ಕಿರಣ್ ಕರಡಿಗಾಲ, ರಾಘವೇಂದ್ರ ವಳಲಹಳ್ಳಿ, ಹೆಚ್.ಆರ್.ಸುದರ್ಶನ್ ವಳಲಹಳ್ಳಿ, ನೇತ್ರಾ ಸುರೇಶ್ ಹಾಗೂ ಉದ್ಯಮಿ ಪ್ರತಾಪ್ ಹಾಜರಿದ್ದರು.

## ಕಾರ್ಮಿಕರ ಹಕ್ಕುಗಳ ಕಗ್ಗೊಲೆ ಮಾಡುತ್ತಿರುವ ರಾಜ್ಯ, ಕೇಂದ್ರ ಸರ್ಕಾರ: ಫೆ.12 ರಂದು ಮುಷ್ಕರ

# ಲೇಬರ್‌ಕೋಡ್‌ಗಳ ವಿರುದ್ಧ ಸಂಘಟಿತ ಹೋರಾಟ ಅನಿವಾರ್ಯ

• ಪ್ರಜೋದಯ ವರದಿ

**ಹಾಸನ:** ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಾರಿಗೆ ತರುತ್ತಿರುವ ನೂತನ ಕಾರ್ಮಿಕ ನೀತಿಗಳು ಮತ್ತು ಖಾಸಗೀಕರಣದ ನಡೆಗಳು ದೇಶದ ಬಂಡವಾಳಗಾರರ ಹಿತಾಸಕ್ತಿಯನ್ನು ಕಾಪಾಡುತ್ತಿದ್ದು, ಕಾರ್ಮಿಕರನ್ನು ಆಧುನಿಕ ಗುಲಾಮಗಿರಿಗೆ ತಳ್ಳುತ್ತಿವೆ ಎಂದು ಸಿಐಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್.ವರಲಕ್ಷ್ಮಿ ಅವರು ಆರೋಪಿಸಿದರು.

ನಗರದ ನಿವೃತ್ತ ನೌಕರರ ಭವನದಲ್ಲಿ ನಡೆದ ಕಾರ್ಮಿಕ ಸಂಘಟನೆಗಳು ಮತ್ತು ಹಾಸನ ಜಿಲ್ಲಾ ಜನಪರ ಸಂಘಟನೆಗಳ ಜಿಲ್ಲಾ ಸಮಾವೇಶದಲ್ಲಿ ಮಾತನಾಡಿದ ಅವರು, ಈ ನೀತಿಗಳನ್ನು ಹಿಮ್ಮೆಟ್ಟಿಸಲು ಫೆ.12ರಂದು ಅಖಿಲ ಭಾರತ ಮುಷ್ಕರವನ್ನು ನಡೆಸಲಾಗುತ್ತಿದೆ ಎಂದರಲ್ಲದೆ, ಬಂಡವಾಳ ಮತ್ತು ಶ್ರಮದ ನಡುವಿನ ಹೋರಾಟ ತೀವ್ರಗೊಂಡಿದ್ದು, ಮುಷ್ಕರವು ಕೇವಲ ಪ್ರತಿಭಟನೆಯಲ್ಲ, ಬದಲಾಗಿ



ಸರ್ಕಾರಗಳ ಜನವಿರೋಧಿ ನೀತಿಗಳ ವಿರುದ್ಧದ ಪ್ರಬಲ ಜನ ಚಳುವಳಿ ಎಂದು ತಿಳಿಸಿದರು.

**ನಾಲ್ಕು ಲೇಬರ್ ಕೋಡ್‌ಗಳ ರದ್ದು:** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಾಲ್ಕು ಲೇಬರ್ ಕೋಡ್‌ಗಳು (ಕಾರ್ಮಿಕ ಸಂಹಿತೆಗಳು) ಕಾರ್ಮಿಕರ ಹಿತಾಸಕ್ತಿಗೆ ವಿರುದ್ಧವಾಗಿದ್ದು, ಅವುಗಳನ್ನು ತಕ್ಷಣವೇ ರದ್ದುಗೊಳಿಸಬೇಕು. ಜೊತೆಗೆ ವಿದ್ಯುತ್ ಕಾಯ್ದೆ ತಿದ್ದುಪಡಿ ಮತ್ತು ಕೃಷಿ ವಿರೋಧಿ ಕಾಯ್ದೆಗಳನ್ನು ಕೈಬಿಡಬೇಕು ಎಂದು ಆಗ್ರಹಿಸಲಾಯಿತು. ರಾಜ್ಯ ಸರ್ಕಾರವು ಈ ಲೇಬರ್ ಕೋಡ್‌ಗಳಿಗೆ ನಿಯಮಾವಳಿಗಳನ್ನು ರಚಿಸಬಾರದು ಮತ್ತು ಕೇಂದ್ರದ ಕಾಯ್ದೆಗಳನ್ನು ತಿರಸ್ಕರಿಸಬೇಕು ಎಂದು ಒತ್ತಾಯಿಸಲಾಯಿತು.

**ವೇತನ ತಾರತಮ್ಯ ಮತ್ತು ಬದುಕು:** ಸಂವಿಧಾನವು ಪ್ರತಿಯೊಬ್ಬರಿಗೂ ಘನತೆಯ ಬದುಕನ್ನು ಖಾತ್ರಿಪಡಿಸಬೇಕು ಎಂದು ಹೇಳುತ್ತದೆ. ಆದರೆ, ಸರ್ಕಾರ 'ಲಿವಿಂಗ್ ವೇಜ್' (ಜೀವನೋಪಾಯ ವೇತನ) ನೀಡುವ ಬದಲು 'ಫ್ಲೋರ್ ವೇಜ್' (ತಳಮಟ್ಟದ ವೇತನ) ಎಂದು ದಿನಕ್ಕೆ ಕೇವಲ 178 ರೂ.ಗಳನ್ನು ನಿಗದಿಪಡಿಸಿದೆ. ಇಷ್ಟು ಕಡಿಮೆ ಮೊತ್ತದಲ್ಲಿ ಕುಟುಂಬ ನಿರ್ವಹಣೆ ಅಸಾಧ್ಯವಾಗಿದ್ದು, ಇದು ಬಡತನವನ್ನು ಹೋಗಲಾಡಿಸುವ ಬದಲು ಹೆಚ್ಚಿಸುತ್ತದೆ ಎಂದು ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

**ಮುಷ್ಕರದ ಹಕ್ಕಿನ ಮೇಲೆ ನಿರ್ಬಂಧ:** ಹೊಸ ನಿಯಮಗಳ ಪ್ರಕಾರ, ಮುಷ್ಕರ ನಡೆಸಲು 14 ದಿನಗಳ ಮೊದಲು ನೋಟಿಸ್ ನೀಡಿ, 60 ದಿನಗಳ ಕಾಲ ಕಾಯಬೇಕು. ಈ ಅವಧಿಯಲ್ಲಿ ಮುಷ್ಕರ ನಡೆಸಿದರೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸುವ ಕಠಿಣ ನಿಯಮಗಳನ್ನು ತರಲಾಗಿದೆ. ಇದು ಕಾರ್ಮಿಕರ ಮೂಲಭೂತ ಹಕ್ಕಾದ ಪ್ರತಿಭಟನೆಯ ಹಕ್ಕನ್ನೇ ಕಸಿದುಕೊಳ್ಳುವ ತಂತ್ರವಾಗಿದೆ.

**ಉದ್ಯೋಗ ಭದ್ರತೆಯ ನಾಶ:** ಗ್ರ್ಯಾಚುವಿಟಿ ಪಡೆಯಲು ಇದ್ದ 5 ವರ್ಷಗಳ ಸೇವಾವಧಿಯನ್ನು 1 ವರ್ಷಕ್ಕೆ ಇಳಿಸಿರುವುದು ಕಾರ್ಮಿಕರ ಪರವಾದ ಕ್ರಮವಲ್ಲ. ಬದಲಾಗಿ, ಒಂದು ವರ್ಷ ದುಡಿಸಿ ಕೆಲಸದಿಂದ ತೆಗೆಯಬಹುದು ಎಂಬ ಅನಿಶ್ಚಿತತೆಯನ್ನು ಸೃಷ್ಟಿಸುವ ಹುನ್ನಾರವಾಗಿದೆ. ಇದರಿಂದ ಖಾಯಂ ಉದ್ಯೋಗ ಎಂಬ ಪರಿಕಲ್ಪನೆಯೇ ಇಲ್ಲವಾಗಲಿದೆ ಎಂದು ಎಚ್ಚರಿಸಿದರು.

**ರೈತ ಮತ್ತು ಕಾರ್ಮಿಕರ ಐಕ್ಯತೆ:** ವಿದ್ಯುತ್ ತಿದ್ದುಪಡಿ ಮಸೂದೆಯಿಂದ ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಹುನ್ನಾರ ಮತ್ತು ಬಹುರಾಷ್ಟ್ರೀಯ ಕಂಪನಿಗಳ ಪರವಾದ ಬೀಜ ಮಸೂದೆ ಜಾರಿಯಾಗುತ್ತಿದೆ. ಆದ್ದರಿಂದ ಈ ಹೋರಾಟ ಕೇವಲ ಕಾರ್ಮಿಕರದ್ದಲ್ಲ, ರೈತರೂ ಸೇರಿ ಒಗ್ಗೂಡಿ ನಡೆಸಬೇಕಾದ ಹೋರಾಟವಾಗಿದೆ ಎಂದು ತಿಳಿಸಿದು.

ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಅಧ್ಯಕ್ಷ ಕುಮಾರ್, ಧರ್ಮೇಶ್, ಎಂ.ಬಿ.ಪುಷ್ಪ, ಅರವಿಂದ, ಧರ್ಮರಾಜ್, ಹೆಚ್.ಆರ್.ನವೀನ್‌ಕುಮಾರ್, ಪರಮಶಿವಯ್ಯ, ಮಂಜುನಾಥ್, ರಾಜಶೇಖರ್ ಭಾಗವಹಿಸಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಕರುನಾಡಿನಲ್ಲಿ ನೆಮ್ಮದಿಯ ಗ್ಯಾರಂಟಿ

## ಸರ್ವರ ಏಳ್ಗೆಗೆ ಸಹಕಾರ





- ರಾಜ್ಯದಲ್ಲಿ ವಾರ್ಷಿಕ ವಹಿವಾಟು **₹. 25,000 ಕೋಟಿ** ಜೊತೆಗೆ ಪ್ರತೀ ದಿನ ಒಂದು ಕೋಟಿ ಲೀಟರ್ ಹಾಲು ಉತ್ಪಾದನೆ
- ಕ್ಷೀರಧಾರೆ ಯೋಜನೆಯಡಿ ಹಾಲು ಉತ್ಪಾದಕರಿಗೆ **ಪ್ರತಿ ಲೀಟರಿಗೆ ₹. 5 ಗಳ** ಪ್ರೋತ್ಸಾಹಧನ
- ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ರೈತರಿಗೆ ಅಗತ್ಯವಿರುವ ಬಂಡವಾಳವನ್ನ ಒದಗಿಸುವ ಸಲುವಾಗಿ ಮಾರ್ಚ್ 2025ರ ಅಂತ್ಯಕ್ಕೆ **59.39 ಲಕ್ಷ ರೈತರಿಗೆ** ಬೆಳೆ ಸಾಲ ವಿತರಣೆ ( ₹. 50,114 ಕೋಟಿ ವೆಚ್ಚ)
- ಬೆಳೆ ಸಾಲಕ್ಕಾಗಿ ಬಡ್ಡಿ ಸಹಾಯಧನ ಯೋಜನೆಯಡಿ **₹. 63.47 ಲಕ್ಷ ರೈತರಿಗೆ** ಆರ್ಥಿಕ ನೆರವು (₹. 2,605 ಕೋಟಿ ವೆಚ್ಚ)
- ನಾಡಿನ ಮಹಿಳೆಯರ ಸ್ವಾವಲಂಬಿ ಬದುಕಿಗೆ ಬೆಂಬಲವಾಗಿ ನಿಲ್ಲುವ ಉದ್ದೇಶದಿಂದ ಕಳೆದೆರಡು ವರ್ಷಗಳಲ್ಲಿ **42,341 ಸ್ವ ಸಹಾಯ ಗುಂಪುಗಳಿಗೆ** ಸಾಲ ವಿತರಣೆ (₹. 1,817 ಕೋಟಿ)
- 2024-25ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಸೂರ್ಯಕಾಂತಿ, ಶೇಂಗಾ, ಹೆಸರುಕಾಳು, ಭತ್ತ ಸೇರಿದಂತೆ ಹಲವು ಕೃಷಿ ಉತ್ಪನ್ನಗಳನ್ನು ಖರೀದಿಸಲಾಗಿದ್ದು, ಒಟ್ಟಾರೆ **2,56,433 ರೈತರು** ಫಲಾನುಭವಿಗಳಾಗಿರುತ್ತಾರೆ.
- ಅನಧಿಕೃತವಾಗಿ ಕಾರ್ಯಾಚರಿಸುತ್ತಿರುವ ಗಿರವಿದಾರ ಸಂಸ್ಥೆಗಳು ಹಾಗೂ ಚೀಟಿ ಸಂಸ್ಥೆಗಳ ಮೇಲೆ ನಿಗಾ
- ಸಹಕಾರ ಸಂಘದ ನೇಮಕಾತಿಗಳಲ್ಲಿ ಸಹಕಾರ ಡಿಪ್ಲೋಮಾ, ಪದವಿ ಪಡೆದವರಿಗೆ ಆದ್ಯತೆ

## ಕರ್ನಾಟಕ ನವ ನಿರ್ಮಾಣಕ್ಕೆ ಗ್ಯಾರಂಟಿ ಸರ್ಕಾರ...

**ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಗ್ಗಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/ ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

